

MAG(2)PRB/CR/165/2022-23 Title code: KARKAN27951

# ಮುಂಜಾನೆ ವಾರ್ತೆ

ಇ-ಪೇಪರ್: www.munjanevarthe.com

EDITOR: H.L.AMARANATH

MUNJANE VARTHE

ಸಂಪಾದಕ: ಹೆಚ್.ಎಲ್ ಅಮರನಾಥ್

ಕನ್ನಡ ದಿನಪತ್ರಿಕೆ

VOLUME : 2 ISSUE: 129 ಸಂಪುಟ: 02 ಸಂಚಿಕೆ: 129 ಪುಟಗಳು: 04 munjanevarthe 22 SATURDAY JUNE 2024 22 ಶನಿವಾರ ಜೂನ್ 2024 ₹ 2



ಜಾಹೀರಾತಿಗಾಗಿ ಸಂಪರ್ಕಿಸಿ

9663122276

www.munjanevarthe.com



ಪ್ರಧಾನಿ, ಸಿಎಂ, ಡಿಸಿಎಂ ಮತ್ತು ಸಚಿವರ ವಿರುದ್ಧ ದುರ್ಭಾಷೆ ಬಳಸಬಾರದು ವಿವರಪುಟ 02

ಶಾಲಾ ಕಾಲೇಜುಗಳಲ್ಲಿ ಯೋಗಾಭ್ಯಾಸಕ್ಕೆ ಹೊಸ ರೂಪ: ರಾಜ್ಯಪಾಲರು ವಿವರಪುಟ 03

ಸಿಎಂ ಆಗಿಯೇ ವಿಧಾನಸಭೆಗೆ ಕಾಲಿಟ್ಟ ಚಂದ್ರಬಾಬು ವಿವರಪುಟ 04


# ಜಮ್ಮು ಕಾಶ್ಮೀರದಲ್ಲಿ ಪ್ರಧಾನಿ ಮೋದಿ



ಶ್ರೀನಗರ: 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ಜಮ್ಮು ಕಾಶ್ಮೀರ ಸನ್ನದ್ಧಗೊಳ್ಳುತ್ತಿದೆ. ಶ್ರೀನಗರದಲ್ಲಿ ಶುಕ್ರವಾರ ನಡೆಯಲಿರುವ ಯೋಗ ದಿನದಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಳ್ಳುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಸಿದ್ಧತಾ ಕಾರ್ಯಗಳು ನಡೆದಿವೆ. ಮೂರನೇ ಬಾರಿ ಪ್ರಧಾನಿಯಾದ ಬಳಿಕ ಇದೇ ಮೊದಲ ಬಾರಿಗೆ ಕಣಿವೆ ನಾಡಿಗೆ ಮೋದಿ ಭೇಟಿ ನೀಡಿದ್ದಾರೆ.

ಪ್ರಸಿದ್ಧ ದಾಲ್ ಸರೋವರದ ದಡದಲ್ಲಿರುವ ಶೇರ್-ಎ-ಕಾಶ್ಮೀರ್ ಇಂಟರ್‌ನ್ಯಾಷನಲ್ ಕನ್ವೆನ್ಷನ್? ಸೆಂಟರ್‌ನಲ್ಲಿ ಸುಮಾರು 7 ಸಾವಿರ ಜನರೊಂದಿಗೆ ಮೋದಿ ಯೋಗಾಭ್ಯಾಸ ಮಾಡುತ್ತಿದ್ದಾರೆ. ಇದೇ ಸಂದರ್ಭದಲ್ಲಿ 1,500 ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾರ್ಯಗಳ ಶಂಕುಸ್ಥಾಪನೆ ಮತ್ತು ಉದ್ಘಾಟನಾ ಕಾರ್ಯಕ್ರಮವನ್ನು ಅವರು ನೆರವೇರಿಸುವರು ಎಂದು ಪಿಐಬಿ ಪ್ರಕಟಣೆ ತಿಳಿಸಿದೆ.

ಯೋಗದಲ್ಲಿ ಭಾಗಿಯಾಗುತ್ತಿರುವ ಜನರಿಗೆ ಕಳೆದ ಮೂರು ದಿನಗಳಿಂದ ಯೋಗಾಸನ ತರಬೇತಿ ನೀಡಲಾಗಿದೆ. ಕಾಲೇಜುಗಳು, ಸಾರ್ವಜನಿಕ ಉದ್ಯಾನವನಗಳು, ಸ್ಥಳೀಯ ಕ್ರೀಡಾಂಗಣ ಸೇರಿದಂತೆ ಅನೇಕ ಕಡೆಗಳಲ್ಲಿ ಯೋಗ ದಿನಾಚರಣೆಗೆ ಸಿದ್ಧತೆ ನಡೆದಿದೆ.

## ರಾಜ್ಯದ ಅಭಿವೃದ್ಧಿಗೆ ತೈಲ ದರ ಏರಿಕೆ ಎಂಬ ಸಿಎಂ ಹೇಳಿಕೆ ವಿಪರ್ಯಾಸ: ಬೊಮ್ಮಾಯಿ



ಹಾವೇರಿ: ರಾಜ್ಯದ ಅಭಿವೃದ್ಧಿಗೆ ತೈಲ ದರ ಏರಿಕೆ ಮಾಡಿರುವುದಾಗಿ ಸಿಎಂ ಸಿದ್ದರಾಮಯ್ಯ ತಿಳಿಸಿದ್ದು ದೊಡ್ಡ ವಿಪರ್ಯಾಸ ಎಂದು ಹಾವೇರಿ ಸಂಸದ ಬಸವರಾಜ್ ಬೊಮ್ಮಾಯಿ ಹೇಳಿದ್ದಾರೆ. ಹಾವೇರಿಯಲ್ಲಿ ಮಾತನಾಡಿದ ಅವರು, ಬೆಲೆ ಏರಿಕೆಯಾದರೆ ಹಣದುಬ್ಬರ ಹೆಚ್ಚಾಗುತ್ತದೆ. ಜನಸಾಮಾನ್ಯರ ಮೇಲೆ ಹೊರೆ ಬೀಳುತ್ತದೆ. ಅವರ ಆದಾಯ, ಖರ್ಚು ಜಾಸ್ತಿಯಾಗುತ್ತದೆ. ಹೀಗಾಗಿ ಅಭಿವೃದ್ಧಿ ಹೇಗೆ ಸಾಧ್ಯ ಹೇಳಿ ಎಂದು ಪ್ರಶ್ನಿಸಿದರು.

ಜನರನ್ನು ಸಂಕಷ್ಟಕ್ಕೆ ನೂಕಿ ಅದ್ಯಾವ ಅಭಿವೃದ್ಧಿ ಮಾಡುತ್ತಾರೋ ಮುಖ್ಯಮಂತ್ರಿಗಳೇ ಹೇಳಬೇಕು.

ಪುಟ 2ಕ್ಕೆ

## ರಸ್ತೆಗಳಲ್ಲಿ ವಾಹನ ನಿಲುಗಡೆ ನಿಷೇಧ



ಬೆಂಗಳೂರು: ಸುಗಮ ಸಂಚಾರ ಹಾಗೂ ಸಂಚಾರ ದಟ್ಟಣೆ ನಿಯಂತ್ರಣಕ್ಕೆ? ಗಾಂಧಿನಗರದ 1 ಕಿ.ಮೀ ಸುತ್ತಲಿನ ಪ್ರಮುಖ ರಸ್ತೆ?ಗಳಲ್ಲಿ ವಾಹನ ನಿಲುಗಡೆಯನ್ನು ನಿಷೇಧಿಸಲಾಗಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು.

ಬ್ರ್ಯಾಂಡ್ ಬೆಂಗಳೂರು ಪರಿಕಲ್ಪನೆಯಡಿ ಫ್ರೀಡಂ ಪಾರ್ಕ್ ಸಮೀಪ ಬಹುಮಹಡಿ ವಾಹನ ನಿಲುಗಡೆ ಸಂಕೀರ್ಣದ ಕಾರ್ಯಾಚರಣೆ ಮತ್ತು ನಿರ್ವಹಣೆಯನ್ನು ಶುಕ್ರವಾರ ಉದ್ಘಾಟಿಸಿ ಅವರು ಮಾತನಾಡಿದರು.

ಬಹುಮಹಡಿ ವಾಹನ ನಿಲುಗಡೆ ಸಂಕೀರ್ಣ ಉದ್ಘಾಟಿಸಿದ ಡಿಸಿಎಂ

ಬಹುಮಹಡಿ ವಾಹನ ನಿಲುಗಡೆ ಸಂಕೀರ್ಣದ ಮೂಲಕ ಬೆಂಗಳೂರು ಹೊಸ ಇತಿಹಾಸದ ಪುಟ ಸೇರಿದೆ. ರಾಜ್ಯಕ್ಕೆ ಈ ಮೂಲಕ ಸಂದೇಶ ರವಾನೆಯಾಗಿದೆ. ಪ್ರತಿ ಗಂಟೆಗೆ ವಾಹನ ನಿಲುಗಡೆಗೆ 20 ರಿಂದ 30 ರೂಪಾಯಿ ನಿಗದಿ ಮಾಡಲಾಗಿದೆ.

ಪುಟ 2ಕ್ಕೆ

## ಅಂಗನವಾಡಿ ಆಹಾರದಲ್ಲಿ ಗುಣಮಟ್ಟ ಕಾಪಾಡಿ



ಬೆಂಗಳೂರು: ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮ ಯೋಜನೆ ಜಾರಿಯಲ್ಲಿ ಯಾವುದೇ ಲೋಪದೋಷ ಆಗದಂತೆ ಎಚ್ಚರಿಕೆ ವಹಿಸಬೇಕು. ನಿರ್ಲಕ್ಷ್ಯ ವಹಿಸಿದರೆ, ಸಂಬಂಧಪಟ್ಟ ಅಧಿಕಾರಿಗಳೇ ನೇರಹೊಣೆ ವಹಿಸಬೇಕಾಗುತ್ತದೆ. ಜೊತೆಗೆ ಅಂಗನವಾಡಿ ಕೇಂದ್ರಗಳಿಗೆ ಪೂರೈಕೆ ಯಾಗುವ ಆಹಾರದಲ್ಲಿ ಗುಣಮಟ್ಟ ಕಾಪಾಡಿಕೊಳ್ಳಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಎಚ್ಚರಿಕೆ ನೀಡಿದರು.

ವಿಕಾಸಸೌಧದಲ್ಲಿ ಶುಕ್ರವಾರ ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ

ಪುಟ 2ಕ್ಕೆ



ಗೌರವಾನ್ವಿತ ಪ್ರಧಾನಮಂತ್ರಿಗಳಾದ ಮಾನ್ಯ ಶ್ರೀ ನರೇಂದ್ರ ಮೋದಿ ಅವರ ಆಶಯ ಮತ್ತು ಸಂಕಲ್ಪದಿಂದ 10ನೇ ಅಂತಾರಾಷ್ಟ್ರೀಯ ಯೋಗ ದಿನ ಅತ್ಯಂತ ಯಶಸ್ವಿಯಾಗಿ ನಡೆಯಿತು. ಭಾರೀ ಕೈಗಾರಿಕೆಗಳ ಸಚಿವರದ ಹೆಚ್ ಡಿ ಕುಮಾರಸ್ವಾಮಿ , ಭಾರತ ಸರ್ಕಾರದ ಸಚಿವಾಲಯದ ವತಿಯಿಂದ ನೋಯ್ಡಾದ ಭಾರತ್ ಹೆವಿ ಇಲಿಕಲ್ ಕಂಪನಿಯ ಟೌನ್ ಶಿಪ್ ನಲ್ಲಿ ಆಯೋಜಿಸಿದ್ದ ಯೋಗ ದಿನದ ಯೋಗಾಭ್ಯಾಸದಲ್ಲಿ ಭಾಗವಹಿಸಲಾಯಿತು. ಭಾರೀ ಕೈಗಾರಿಕೆ ಸಚಿವಾಲಯದ ಕಾರ್ಯದರ್ಶಿ ಶ್ರೀ ಕಮರನ್ ರಿಜ್ವಿ, ಭಾರತ್ ಹೆವಿ ಎಲೆಕ್ಟ್ರಿಕಲ್ಸ್ ಲಿಮಿಟೆಡ್ ಅಧ್ಯಕ್ಷ – ವ್ಯವಸ್ಥಾಪಕ ನಿರ್ದೇಶಕ ಶ್ರೀ ಕೆ.ಸದಾಶಿವಮೂರ್ತಿ, ಕಂಪನಿಯ ನಿರ್ದೇಶಕರು, ಹಿರಿಯ ಅಧಿಕಾರಿಗಳು, ಸಿಬ್ಬಂದಿ ಸೇರಿದಂತೆ ಅನೇಕರು ಯೋಗಾಭ್ಯಾಸದಲ್ಲಿ ಪಾಲ್ಗೊಂಡಿದ್ದರು.

## ರಾಜ್ಯದಲ್ಲಿ ಎಲೆಕ್ಟ್ರಿಕ್ ಬೈಕ್ ತಯಾರಿಕಾ ಘಟಕ ಸೇರಿ 64 ಸಂಸ್ಥೆಗಳಿಂದ ಹೂಡಿಕೆ



ಬೆಂಗಳೂರು: ಇಂಟರ್‌ನ್ಯಾಷನಲ್ ಬ್ಯಾಟರಿ ಕಂಪನಿ ಇಂಡಿಯಾ, ರಿವರ್ ಮೊಬಿಲಿಟಿ, ವೇಗಾ ಆಟೊ ಆ?ಯಕ್ಸೆಸರೀಸ್, ಮಿರ್‍ರಾ ಆ?ಯಂಡ್ ಮಿರ್‍ರಾ ಇಂಡಸ್ಟ್ರೀಸ್ ಸೇರಿದಂತೆ ಒಟ್ಟಾರೆ 64 ಯೋಜನೆಗಳಲ್ಲಿ 3,587 ಕೋಟಿ ರೂ ಬಂಡವಾಳ ಹೂಡಿಕೆಗೆ ಶುಕ್ರವಾರ ನಡೆದ 146ನೇ ರಾಜ್ಯ ಮಟ್ಟದ ಏಕಗವಾಕ್ಷಿ ಅನುಮೋದನಾ ಸಮಿತಿ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ.

ಬೃಹತ್ ಮತ್ತು ಮಧ್ಯಮ

ಪುಟ 2ಕ್ಕೆ

## ಟಿವಿವಿ ಪೆಟ್ರೋಲ್ ಬಂಕ್ ಬಳಿ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ

ರಾಜ್ಯ ಕಾಂಗ್ರೆಸ್ ಸರ್ಕಾರದ ಪೆಟ್ರೋಲ್-ಡಿಸೇಲ್ ಬೆಲೆ ಏರಿಕೆ ನಿರ್ಧಾರವನ್ನು ಖಂಡಿಸಿ ಇಂದು ಬಿಜೆಪಿ ಮಧುಗಿರಿ ಮಂಡಲ ವತಿಯಿಂದ ಮಧುಗಿರಿ ನಗರದ ತುಮಕೂರು ಗೇಟ್ ಬಳಿ ರಸ್ತೆ ತಡೆದು, ಟಿವಿವಿ ಪೆಟ್ರೋಲ್ ಬಂಕ್ ಸರ್ಕಲ್ ನಲ್ಲಿ ಮಾನವ ಸರಪಳಿ ನಿರ್ಮಿಸಿ ಇಂದು ಪ್ರತಿಭಟನೆ ಮಾಡಲಾಯಿತು. ನಂತರ ತಾಲೂಕು ಕಚೇರಿಗೆ ಮೆರವಣಿಗೆ ಮೂಲಕ ತಲುಪಿ ತಹಶೀಲ್ದಾರ್ ಅವರಿಗೆ ಮನವಿ ಪತ್ರವನ್ನು ಸಲ್ಲಿಸಲಾಯಿತು. ಸಂದರ್ಭದಲ್ಲಿ ಮಂಡಲ ಅಧ್ಯಕ್ಷ ನಾಗೇಂದ್ರಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರುದ್ರೇಶ್ ಇತರರು ಇದ್ದರು.



## ರೋಹಿಣಿ ಸಿಂಧೂರಿ ವಿರುದ್ಧ ಲೋಕಾಯುಕ್ತಕ್ಕೆ ದೂರು ನೀಡಿದ ಬಾಲಿವುಡ್ ಗಾಯಕ ಲಕ್ಕಿ ಅಲಿ



ಬೆಂಗಳೂರು: ಭೂ ಕಬಳಿಕೆ ಆರೋಪದಡಿ ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ಹಾಗು ಅವರ ಪತಿ ವಿರುದ್ಧ ಬಾಲಿವುಡ್ ಗಾಯಕ ಲಕ್ಕಿ ಅಲಿ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದಾರೆ.

ಯಲಹಂಕ ನ್ಯೂಟೌನ್? ಕೆಂಚೇನಹಳ್ಳಿ ಬಳಿ ಇರುವ ತಮ್ಮ ಜಮೀನು ಕಬಳಿಸಲು ರೋಹಿಣಿ ಸಿಂಧೂರಿ ಹಾಗು ಪತಿ ಸುಧೀರ್ ರೆಡ್ಡಿ ಸೇರಿದಂತೆ ಯಲಹಂಕ ಉಪವಿಭಾಗದ ಎಸಿಪಿ ಮಂಜುನಾಥ್, ಸರ್ವೇಯರ್ ಅಧಿಕಾರಿ ಮನೋಹರ್ ಸೇರಿದಂತೆ 6 ಮಂದಿ ಯತ್ನಿಸಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ. ದೂರಿನ ಪ್ರತಿಯನ್ನು ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ. 2022ರಲ್ಲಿ ಸುಧೀರ್ ರೆಡ್ಡಿ ಜಮೀನು ಕಬಳಿಸಲು ಪ್ರಯತ್ನಿಸಿದ್ದು, ರೋಹಿಣಿ ಸಿಂಧೂರಿ ಕೂಡಾ ಸಹಾಯ ಮಾಡಿದ್ದರು. ಸ್ಥಳೀಯ ಪೊಲೀಸರಿಗೆ ದೂರು ನೀಡಿದರೂ ಸೂಕ್ತ ಕ್ರಮ ಕೈಗೊಂಡಿರಲಿಲ್ಲ ಎಂದು ಅಲಿ ಆರೋಪಿಸಿದ್ದಾರೆ.

## ಅಂತರಾಷ್ಟ್ರೀಯ ಯೋಗ ದಿನಾಚರಣೆ

ಯಾದಗಿರಿ; ಹತ್ತನೆಯ ಅಂತರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ತಾಲೂಕಿನ ಯರಗೋಳ ಗ್ರಾಮದ ಸರ್ವೋದಯ ಶಾಲೆಯಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಈ ಕಾರ್ಯಕ್ರಮದಲ್ಲಿ ಮುಖ್ಯ ಗುರುಗಳು ಹಾಗೂ ಶಾಲೆಯ ಶಿಕ್ಷಕರು ಭಾಗವಹಿಸಿದ್ದರು.

ವರದಿ: ಮಲ್ಲಿಕಾರ್ಜುನ ಕುಂಬಾರಳ್ಳಿ ಯಾದಗಿರಿ ಜಿಲ್ಲೆ




ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjanevarthe.com

ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುಗುವುದು ಈಗ ಮತ್ತಷ್ಟು ಸುಲಭ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶನಿವಾರ 22 ಜೂನ್ 2024
SATURDAY 22 June 2024

# ಪ್ರಧಾನಿ, ಸಿಎಂ, ಡಿಸಿಎಂ ಮತ್ತು ಸಚಿವರ ವಿರುದ್ಧ ದುರ್ಭಾಷೆ ಬಳಸಬಾರದು: ಹೈಕೋರ್ಟ್

ಬೆಂಗಳೂರು: ಚುನಾವಣಾ ಪ್ರಚಾರ ಸಂದರ್ಭದಲ್ಲಿ ರಾಜಕೀಯ ನಾಯಕರ ಅವಹೇಳನಾಕಾರಿ ಹೇಳಿಕೆಗಳಿಗೆ ಕಿಡಿಕಾರಿರುವ ಹೈಕೋರ್ಟ್, ಚುನಾವಣೆಗಳ ಸಂದರ್ಭದಲ್ಲಿ ಮನುಷ್ಯನ ನಾಲಿಗೆ ಮತ್ತು ಮೆದುಳಿನ ನಡುವಿನ ಸೇತುವೆ ಕುಸಿಯದಂತೆ ನಿಗಾ ವಹಿಸಬೇಕು ಎಂದು ಖಡಕ್ ಆಗಿ ಚಾಟಿ ಬೀಸಿದೆ.

ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕುರಿತು ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿ ಪೋಸ್ಟ್ ಹಂಚಿಕೊಂಡ ಪ್ರಕರಣದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ಸಾಮಾಜಿಕ ಜಾಲತಾಣದ ಉಸ್ತುವಾರಿ ಪ್ರಶಾಂತ್ ಮಾಕನೂರ ವಿರುದ್ಧದ ಪ್ರಕರಣ ರದ್ದು ಕೋರಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಕೃಷ್ಣ ದೀಕ್ಷಿತ್ ಅವರಿದ್ದ ಪೀಠ, ದೇಶದ ಪ್ರಧಾನಿ, ರಾಜ್ಯದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಮತ್ತು ಸಚಿವರ ವಿರುದ್ಧ ದುರ್ಭಾಷೆ ಬಳಸಬಾರದು ಎಂದು ಎಚ್ಚರಿಸಿತು.

ಅರ್ಜಿದಾರರ ವಿರುದ್ಧ ನಗರದ ಮಲ್ಲೇಶ್ವರಂ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಎರಡು ಪ್ರತ್ಯೇಕ ಎಫ್‌ಐಆರ್‌ಗಳಿಗೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ಪ್ರತಿವಾದಿಯಾಗಿರುವ ಮಲ್ಲೇಶ್ವರ ಠಾಣಾ ಪೊಲೀಸರಿಗೆ ನೋಟಿಸ್ ಜಾರಿಗೊಳಿಸಿ ವಿಚಾರಣೆ ಮುಂದೂಡಿದೆ.

ಇದಕ್ಕೂ ಮುನ್ನ ಪ್ರಕರಣದಲ್ಲಿ ಬಿಜೆಪಿ ರಾಜ್ಯಘಟಕದ ಸಾಮಾಜಿಕ ಜಾಲತಾಣದ ಖಾತೆಯಲ್ಲಿ ರಾಜ್ಯದ ಸಿಎಂ ಮತ್ತು ಡಿಸಿಎಂ ಹಾಗೂ ಸಂಸದ ರಾಹುಲ್ ಗಾಂಧಿ ವಿರುದ್ಧ ಬಳಸಿರುವ ಭಾಷೆಯ ಕುರಿತು ಅರ್ಜಿದಾರರ ವಿರುದ್ಧ ತೀವ್ರ



ಬೇಸರ ವ್ಯಕ್ತಪಡಿಸಿದ ಪೀಠ, ರಾಜ್ಯದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಮತ್ತು ಸಚಿವರ ವಿರುದ್ಧ ದುರ್ಭಾಷೆ ಬಳಸಬಾರದು. ಗೌರವದ ಹಾಗೂ ಸುಂದರ ಭಾಷೆ ಬಳಸಬೇಕು. ಮಾತಿನಲ್ಲಿ ಪ್ರೀತಿ, ಜವಾಬ್ದಾರಿ, ಸೌಜನ್ಯ ಹಾಗೂ ಸಂಯಮ ಇರಬೇಕು. ಚುನಾವಣೆ ವೇಳೆ ಜನರಿಗೆ ಜ್ವರ ಬಂದಿರುತ್ತದೆ. ಅಂತಹ ಸಂದರ್ಭದಲ್ಲಿ ಏನೋನೋ ಮಾತನಾಡಿ ಜನರನ್ನು ಉದ್ವೇಗಕ್ಕೆ ಗುರಿಪಡಿಸಬಾರದು. ಎಚ್ಚರಿಕೆಯಿಂದ ಮಾತನಾಡಬೇಕು ಎಂದು ಸಲಹೆ ನೀಡಿತು.

ವಿಚಾರಣೆ ವೇಳೆ ಕೆಲವೊಂದು ಅಹಿತಕರ ಘಟನೆ ನಡೆದಿರುವುದು ನಿಜ. ಅವುಗಳನ್ನು ಸರ್ಕಾರ ಸಹ ಖಂಡಿಸುತ್ತದೆ. ಆದರೆ, ಸಾರ್ವಜನಿಕವಾಗಿ ಸಿಎಂ ಹಾಗೂ ಡಿಸಿಎಂ ಅವರನ್ನು ನಿಂದಿಸುವುದು ಸರಿಯಲ್ಲ. ಹಾಗಾಗಿ, ವಿಚಾರಣೆಗೆ ಹಾಜರಾಗಲು ಅರ್ಜಿದಾರರಿಗೆ ಸೂಚಿಸುವುದಿಲ್ಲ. ಆದರೆ, ತನಿಖೆ ಮುಂದುವರಿಯಲು ಅನುಮತಿ ನೀಡಬೇಕು ಎಂದು ಸರ್ಕಾರದ ಹೆಚ್ಚುವರಿ ರಾಜ್ಯ ಸರ್ಕಾರಿ ಅಭಿಯೋಜಕ ಬಿ.ಎನ್.ಜಗದೀಶ್ ಕೋರಿದರು.

ಅದಕ್ಕೊಪ್ಪದ ನ್ಯಾಯಪೀಠ, ಚುನಾವಣೆ ಈಗಾಗಲೇ ಮುಗಿದಿದೆ. ಎಲ್ಲರ ಮೇಲೆ ತನಿಖೆ ನಡೆಸಬೇಕು ಎಂದಾದರೆ ಹೇಗೆ?. ಎಲ್ಲರನ್ನೂ ಜೈಲಿನಲ್ಲಿ ಕೂರಿಸೋದು ಹಾಗೂ ಎಲ್ಲರನ್ನೂ ಕಸ್ಟಡಿಗೆ ಕೇಳುವುದು ಸರಿಯಾದ ದಾರಿಯಲ್ಲ. ಹೀಗೆ ಮಾಡುತ್ತಾ ಹೋದರೆ ನಾಳೆ ಹೊರಗಡೆ ಇರುವವರಿಗಿಂತ ಜೈಲು ಹಾಗೂ ಕಸ್ಟಡಿಯಲ್ಲಿ ಇರುವವರ ಸಂಖ್ಯೆಯೇ ಹೆಚ್ಚಿರುತ್ತದೆ ಎಂದು ತಿಳಿಸಿತು.

ರಾಮಾಯಣ ಪ್ರಸಂಗ ಪ್ರಸ್ತಾಪಿಸಿದ ನ್ಯಾಯಪೀಠ, ಸುಗ್ರೀವ ಹಾಗೂ ಆತನ ಸೈನ್ಯವು ಮರೆಯಲ್ಲಿ ನಿಂತು, ಸೀತೆಯನ್ನು ಹುಡುಕುತ್ತಾ ಬಂದ ರಾಮ-ಲಕ್ಷ್ಮಣ ಅವರನ್ನು ಮಾತನಾಡಿಸಲು ಹನುಮಂತನನ್ನು ಕಳುಹಿಸಿದ ಪ್ರಸಂಗ ರಾಮಾಯಣದಲ್ಲಿ ಬರುತ್ತದೆ. ಮೊದಲಿಗೆ ಹನುಮಂತನನ್ನು ನೋಡಿದ್ದ ಲಕ್ಷ್ಮಣ, ಆತ ರಾಕ್ಷಸನೇ ಇರಬೇಕು ಎಂದು ಭಾವಿಸಿದ್ದ. ಹನುಮಂತನ ಸೌಜನ್ಯಯುತ ಮಾತು ಕೇಳಿದ ನಂತರ ಆತ ರಾಕ್ಷಸನಾಗಿರಲು ಸಾಧ್ಯವೇ ಇಲ್ಲ ನಿರ್ಧರಿಸಿದ್ದ.

ಹಾಗಾಗಿ, ಮಾತನಾಡುವಾಗ ಗೌರವದ ಭಾಷೆ ಬಳಸಬೇಕು ಎಂದು ನ್ಯಾಯಮೂರ್ತಿಗಳು ತಿಳಿಸಿದರು.

ವಿರೋಧ ಪಕ್ಷದವರು ಎಂದರೆ ಶತ್ರುಗಳಲ್ಲ. ಈಗ ಅವರ ಪಕ್ಷ ಅಧಿಕಾರದಲ್ಲಿ ಇರಬಹುದು. ಮುಂದಿನ ಬಾರಿ ಮತ್ತೊಂದು ಪಕ್ಷದವರು ಅಧಿಕಾರಕ್ಕೆ ಬರಬಹುದು. ಆದರೆ, ಸಾಂವಿಧಾನಿಕ ಹುದ್ದೆಯಲ್ಲಿರುವ ಬಗ್ಗೆ ಕೆಟ್ಟದಾಗಿ ಮಾತನಾಡಬಾರದು. ವಿಶೇಷವಾಗಿ ಟ್ವೀಟ್‌ಗಳು ಸ್ವೀಟ್ ಆಗಿರಬೇಕು. ಹೊರತು ಅಸಿಡಿಟಿಯಿಂದ ಕೂಡಿರಬಾರದು. ದುರ್ಭಾಷೆ ಬಳಸಿದರೆ ನಾಗರಿಕತೆಯ ಮೌಲ್ಯಗಳು ಏನಾಗಬೇಕು?. ಶತೃಗಳನ್ನೂ ಗೌರವದಿಂದ ಕಾಣುವ ದೇಶ ನಮ್ಮದು ಎನ್ನುವುದನ್ನು ಯಾರೂ ಮರೆಯಬಾರದು ಎಂದು ಪೀಠ ಹೇಳಿತು.

## ರಾಜ್ಯದಲ್ಲಿ ಮತ್ತೆ ಪ್ರಬಲಗೊಂಡ ಮುಂಗಾರು, ರೆಡ್‌ಅಲರ್ಟ್ ಘೋಷಣೆ




ಬೆಂಗಳೂರು: ಮೇಲ್ಮೈ ಸುಳಿಗಾಳಿ ಉಂಟಾಗಿರುವ ಪರಿಣಾಮ ನೈರುತ್ಯ ಮುಂಗಾರು ಪ್ರಬಲವಾಗಿದ್ದು, ನಿನ್ನೆಯಿಂದ ರಾಜ್ಯದ ಹಲವೆಡೆ ಮಳೆ ಹೆಚ್ಚಾಗಿದೆ. ವಾರಾಂತ್ಯಕ್ಕೆ ಮಳೆ ಪ್ರಮಾಣ ಹೆಚ್ಚಾಗಲಿದೆ. ಕರಾವಳಿ, ಮಲೆನಾಡು ಸೇರಿದಂತೆ ಹಲವೆಡೆ ಭಾರೀ ಮಳೆಯಾಗುವ ಸಾಧ್ಯತೆಗಳಿವೆ. ಹವಾಮಾನ ಮುನ್ಸೂಚನೆ ಪ್ರಕಾರ ಇನ್ನೂ ನಾಲ್ಕು ದಿನಗಳ ಕಾಲ ಮಳೆಯಾಗಲಿದೆ.

ಕರ್ನಾಟಕ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ, ಕರಾವಳಿ ಜಿಲ್ಲೆಗಳಲ್ಲಿ ಭಾರೀ ಮಳೆ ಮುನ್ನೆಚ್ಚರಿಕೆ ನೀಡಲಾಗಿದೆ. ಈಗಾಗಲೇ ಹಳದಿ ಮುನ್ನೆಚ್ಚರಿಕೆ ನೀಡಿದ್ದು, ನಾಳೆಯಿಂದ ಮೂರು ದಿನ ಕೆಂಪು ಎಚ್ಚರಿಕೆ ನೀಡಲಾಗಿದೆ

ರಾಜ್ಯದ ಉತ್ತರ ಮತ್ತು ದಕ್ಷಿಣ ಒಳನಾಡಿನಲ್ಲೂ ಮಳೆ ಹೆಚ್ಚಾಗುವ ಸಾಧ್ಯತೆ ಇದ್ದು, ನಾಳೆಯಿಂದ ಹಳದಿ ಮುನ್ನೆಚ್ಚರಿಕೆ ನೀಡಲಾಗಿದೆ. ಗಂಟೆಗೆ 30ರಿಂದ 40 ಕಿ.ಮೀ.ವೇಗದಲ್ಲಿ ಗಾಳಿ ಬೀಸಲಿದ್ದು, ಗುಡುಗು ಮತ್ತು ಮಿಂಚಿನಿಂದ ಕೂಡಿದ ಮಳೆಯಾಗುವ ಸಾಧ್ಯತೆಗಳಿವೆ.

ಈಗಾಗಲೇ ಕರಾವಳಿ ಭಾಗದಲ್ಲಿ ಮಳೆ ಪ್ರಮಾಣ ಹೆಚ್ಚಾಗಿದೆ. ರಾಜ್ಯದಲ್ಲಿ ಮೂರು ದಿನಗಳ ಕಾಲ ಭಾಗಶಃ ಮೋಡ ಕವಿದ ವಾತಾವರಣವಿದ್ದು, ಮಧ್ಯಾಹ್ನದ ನಂತರ ಹಾಗೂ ರಾತ್ರಿ ವೇಳೆ ಮಳೆಯಾಗಲಿದೆ.

ಜೂನ್ ಒಂದರಿಂದ ಇದುವರೆಗೆ ರಾಜ್ಯದಲ್ಲಿ ವಾಡಿಕೆಗಿಂತ ಶೇ.9 ರಷ್ಟು ಹೆಚ್ಚು ಮಳೆಯಾಗಿದೆ. ಆದರೆ, ಹೆಚ್ಚು ಮಳೆಯಾಗುವ ಕರಾವಳಿ ಹಾಗೂ ಮಲೆನಾಡು ಭಾಗದಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. ಉತ್ತರ ಮತ್ತು ದಕ್ಷಿಣ ಒಳನಾಡಿನಲ್ಲಿ ಕ್ರಮವಾಗಿ ಶೇ.78 ಹಾಗೂ ಶೇ.84ರಷ್ಟು ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ.

ಮುಂದಿನ ನಾಲ್ಕು ದಿನ ಭಾರೀ ಮಳೆ ಮುನ್ನೆಚ್ಚರಿಕೆ ಇರುವ ಹಿನ್ನೆಲೆಯಲ್ಲಿ ನದಿಗಳ ನೀರಿನ ಮಟ್ಟ ಹೆಚ್ಚಾಗಲಿದ್ದು, ನದಿಪಾತ್ರಗಳ ಜನರು ಮುನ್ನೆಚ್ಚರಿಕೆ ವಹಿಸುವಂತೆ ಸೂಚನೆ ನೀಡಲಾಗಿದೆ. ಬೆಂಗಳೂರು ಸುತ್ತಮುತ್ತಲ ಜಿಲ್ಲೆಗಳಲ್ಲಿ ಭಾಗಶಃ ಮೋಡ ಕವಿದ ವಾತಾವರಣವಿರಲಿದ್ದು, ಮಧ್ಯಾಹ್ನದ ನಂತರ ಕೆಲವೆಡೆ ಸಾಧಾರಣ ಮಳೆಯಾಗುವ ಮುನ್ಸೂಚನೆಗಳಿವೆ.

## ಇವಿಎಂ ಮರು ಪರಿಶೀಲನೆಗೆ ಆಗ್ರಹಿಸಿ 8 ಅರ್ಜಿಗಳು ಸಲ್ಲಿಕೆ

ನವದೆಹಲಿ: ವಿದ್ಯುನ್ಮಾನ ಮತಯಂತ್ರಗಳ (ಇವಿಎಂ) ಬಗ್ಗೆ ಅನುಮಾನ ವ್ಯಕ್ತಪಡಿಸಿ ಅವುಗಳನ್ನು ಮರು ಪರಿಶೀಲನೆ ನಡೆಸುವಂತೆ ಚುನಾವಣಾ ಆಯೋಗಕ್ಕೆ ಎಂಟು ಅರ್ಜಿಗಳು ಸಲ್ಲಿಕೆಯಾಗಿವೆ.



ಮತಪತ್ರ ಬಳಸಿ ಚುನಾವಣೆ ನಡೆಸಬೇಕು ಎಂಬುದರ ಕುರಿತು ಸಲ್ಲಿಕೆಯಾಗಿದ್ದ ಅರ್ಜಿಯನ್ನು ತಿರಸ್ಕರಿಸಿದ ಸುಪ್ರೀಂ ಕೋರ್ಟ್ ಚುನಾವಣಾ ಲಿತಾಂಶದಲ್ಲಿ 2 ಮತ್ತು 3ನೇ ಸ್ಥಾನ ಗಳಿಸಿದ ಸೋತ ಅಭ್ಯರ್ಥಿಗಳು, ಪ್ರತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಶೇ.5 ಇವಿಎಂಗಳಲ್ಲಿನ ಚಿಪ್ಗಳ ಪರಿಶೀಲನೆಗಾಗಿ ಚುನಾವಣಾ ಆಯೋಗ ಅವಕಾಶ ಕಲ್ಪಿಸಿತ್ತು. ಸುಪ್ರೀಂ ಕೋರ್ಟ್ನ ಈ ಅವಕಾಶದನ್ವಯ, ಮಹಾರಾಷ್ಟ್ರದ ಅಹಮದ್ನಗರ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಸುಜಯ್ ವಿಖೆ ಪಾಟೀಲ್ ಅವರು 40 ಮತಗಟ್ಟೆಗಳಲ್ಲಿನ ಇವಿಎಂಗಳನ್ನು ಪರಿಶೀಲಿಸುವಂತೆ ಕೋರಿದ್ದಾರೆ. ವೈಎಸ್‌ಆರ್‌ಸಿಪಿ ಮತ್ತು ಡಿಎಂಡಿಕೆ ಅಭ್ಯರ್ಥಿಗಳು ಸಹ ಪರಿಶೀಲನೆಗಾಗಿ ಅರ್ಜಿ ಸಲ್ಲಿಸಿದ್ದಾರೆ. ಆಂಧ್ರಪ್ರದೇಶ ಹಾಗೂ ಒಡಿಶಾದಲ್ಲಿ ವಿಧಾನಸಭಾ ಚುನಾವಣೆ ನಡೆದಿದ್ದು, ವೈಎಸ್‌ಆರ್ಪಿ ಮತ್ತು ಬಿಜೆಡಿಯ ಅಭ್ಯರ್ಥಿಗಳು ಇವಿಎಂ ಪರಿಶೀಲನೆಗೆ ಅರ್ಜಿ ಹಾಕಿದ್ದಾರೆ. ಚುನಾವಣಾ ಆಯೋಗವು ಹೇಳಿರುವಂತೆ ಚುನಾವಣೆಯಲ್ಲಿ ಎರಡು ಅಥವಾ ಮೂರನೇ ಸ್ಥಾನದಲ್ಲಿರುವ ಪರಾಜಿತ ಅಭ್ಯರ್ಥಿಗಳು ಇವಿಎಂ ಪರಿಶೀಲನೆಗೆ ಅರ್ಜಿ ಸಲ್ಲಿಸಬಹುದಾಗಿದ್ದು, ಪ್ರತೀ ಇವಿಎಂಗೆ 1,47,200 ರೂಪಾಯಿ ಪಾವತಿಸಿ ಪರಿಶೀಲನೆಗೆ ಮನವಿ ಮಾಡಬಹುದಾಗಿದೆ.

## ರಾಜ್ಯದ ಅಭಿವೃದ್ಧಿಗೆ ತೈಲ ದರ ಏರಿಕೆ ಎಂಬ ಸಿಎಂ ಹೇಳಿಕೆ ವಿಪರ್ಯಾಸ: ಬೊಮ್ಮಾಯಿ

ಪುಟ 1ರಿಂದ

ಕೇವಲ ಗ್ಯಾರಂಟಿಯಷ್ಟೇ ಅಲ್ಲ, ಇಡೀ ಆರ್ಥಿಕ ವ್ಯವಸ್ಥೆಯನ್ನೇ ಹಾಳು ಮಾಡಿದ್ದಾರೆ. ಸಂಪನ್ಮೂಲ ಕ್ರೋಢೀಕರಿಸುವುದರಲ್ಲಿ ಸರ್ಕಾರ ವಿಫಲವಾಗಿದೆ. ಈ ರಾಜ್ಯದಲ್ಲಿ ಜಿಎಸ್‌ಟಿಯಲ್ಲಿ ಎರಡು ಮೂರು ಟ್ರೇಡ್‌ಗಳಲ್ಲಿ ದೊಡ್ಡ ಸೋರಿಕೆಯಾಗುತ್ತಿದೆ ಎಂದು ಹೇಳಿದರು.

ಸ್ಕ್ರ್ಯಾಪ್ ಡೀಲಿಂಗ್, ಅಡಿಕೆ ವ್ಯಾಪಾರ, ಪ್ಲಾಸ್ಟಿಕ್ ವ್ಯವಹಾರದಲ್ಲಿ ಲೀಕೇಜಾಗುತ್ತಿದೆ. ಸರಿಯಾದ ಕ್ರಮ ಕೈಗೊಂಡರೆ ಅದರಲ್ಲಿಯೇ ಸಾಕಷ್ಟು ಆದಾಯ ಬರುತ್ತದೆ ಎಂದರು. ಪೆಟ್ರೋಲ್, ಡೀಸೆಲ್ ದರ ಹೆಚ್ಚಿಸಿ ಜನರ ಮೇಲೆ ತೆರಿಗೆ ಹೆಚ್ಚಿಸುವುದಲ್ಲ. ನಿಮ್ಮ ಆಡಳಿತವನ್ನು ಸುಧಾರಣೆ ಮಾಡಿ, ಲೀಕೇಜ್ ತಪ್ಪಿಸಿ ಸಂಪನ್ಮೂಲ ಕ್ರೋಢೀಕರಿಸಿ. ಹಣ ಮತ್ತು ಸಮಯ ನಿರ್ವಹಣೆ ಮಾಡಿದರೆ ಇದಕ್ಕೆ ಪರಿಹಾರವಿದೆ ಎಂದು ತಿಳಿಸಿದರು. ಅಭಿವೃದ್ದಿನೂ ಮಾಡಬೇಕು, ಗ್ಯಾರಂಟಿನೂ ಮಾಡಬೇಕು. ಆಗ ಸಿದ್ದರಾಮಯ್ಯಗೆ ಶಹಬ್ಬಾಸ್ ಎನ್ನುತ್ತೇವೆ. ಒಂದೆಡೆ ಅಭಿವೃದ್ದಿ ಶೂನ್ಯ ಮಾಡಿ ಜನರಿಗೆ ತೆರಿಗೆ ಹಾಕುತ್ತಿದ್ದಾರೆ. ಇದು ಸರಿಯಾದ ಆಡಳಿತವಲ್ಲ ಎಂದು ಬೊಮ್ಮಾಯಿ ಅಸಮಾಧಾನ ವ್ಯಕ್ತಪಡಿಸಿದರು.

## ದರ ಇಳಿಕೆ ಬಗ್ಗೆ ಮದ್ಯಪ್ರಿಯರಿಗೆ ಸಿಹಿ ಸುದ್ದಿ ಕೊಟ್ಟ ಸರ್ಕಾರ

ಬೆಂಗಳೂರು: ರಾಜ್ಯದ ಮದ್ಯಪ್ರಿಯರಿಗೆ ಕರ್ನಾಟಕ ರಾಜ್ಯ ಸರ್ಕಾರ ಸಿಹಿ ಸುದ್ದಿ ನೀಡಿದೆ. ಮದ್ಯಪ್ರಿಯರ ಕುರಿತು ಫೆಬ್ರವರಿಯಲ್ಲಿ ಬಜೆಟ್‌ನಲ್ಲಿ ಕೊಟ್ಟಿದ್ದ ಭರವಸೆಯನ್ನು ಉಳಿಸಿಕೊಳ್ಳುವುದಾಗಿ ತಿಳಿಸಿರುವ ರಾಜ್ಯ ಸರ್ಕಾರ, ಜುಲೈ 1ರಿಂದ ವಿವಿಧ ಮದ್ಯದ ಬೆಲೆ ಇಳಿಕೆ ಜಾರಿಗೆ ತರಲಿದೆ. ಇದರಿಂದ ಪಾನಪ್ರಿಯರು ಫುಲ್ ಖುಷ್ ಆಗಿದ್ದಾರೆ. ಜುಲೈ 1ರಿಂದ ವಿವಿಧ ದುಬಾರಿ ಪ್ರಿಮಿಯಂ ಮದ್ಯದ ಅಬಕಾರಿ ತೆರಿಗೆಯನ್ನು ಕಡಿಮೆ ಮಾಡುವುದಾಗಿ ರಾಜ್ಯ ಸರ್ಕಾರ ಘೋಷಿಸಿದೆ. ಇಂಧನ ಬೆಲೆ ಹಾಗೂ ದಿನಸಿ ವಸ್ತುಗಳು ಬೆಲೆ ಏರಿಕೆಯ ಸಂದರ್ಭದಲ್ಲಿ ರಾಜ್ಯ ಸರ್ಕಾರ ಮದ್ಯದ ಬೆಲೆ ಇಳಿಸುವ ನಿರ್ಧಾರ ಕೆಲವರಿಗೆ ಅಚ್ಚರಿ ತರಿಸಿದೆ. ಎಲ್ಲ ಜನಸಾಮಾನ್ಯರಿಗೆ ಅನುಕೂಲವಾಗುವಂತಹ ನಿರ್ಧಾರ ಕೈಗೊಳ್ಳಬೇಕಿತ್ತು ಎಂಬ ಅಭಿಪ್ರಾಯವೂ ಕೇಳಿ ಬಂದಿದೆ.

ಬೇರೆ ರಾಜ್ಯಗಳ ಬೆಲೆ ನೋಡಿ ದರ ಪರಿಷ್ಕರಣೆ: ಯಾವೆಲ್ಲ ಮದ್ಯದ ಬೆಲೆ ಇಳಿಕೆ ಆಗಲಿದೆ, ಯಾವ ಬ್ರ್ಯಾಂಡ್ ಎಂಬ ಮಾಹಿತಿ ನೋಡುವುದಾದರೆ, ದುಬಾರಿ ಮದ್ಯದ ಸೆಮಿ ಪ್ರೀಮಿಯಂ ಮತ್ತು ಪ್ರೀಮಿಯಂ ಅಬಕಾರಿ ಬ್ರ್ಯಾಂಡ್ ಗಳ ಮದ್ಯದ ತೆರಿಗೆ ಇಳಿಕೆ ಆಗಲಿದೆ. ನೆರೆ ಹೊರೆಯ ರಾಜ್ಯಗಳಲ್ಲಿನ ಮದ್ಯದ ಬೆಲೆ ನೋಡಿಕೊಂಡು ಇಲ್ಲಿ ಪರಿಷ್ಕರಿಸಲು ಸರ್ಕಾರ ನಿರ್ಧರಿಸಿದೆ.

ದುಬಾರಿ ಮದ್ಯ ಇನ್ನು ಅಗ್ಗ: ಇದರಿಂದ ಮದ್ಯ ಪ್ರಿಯರು ಖುಷಿಯಾಗಿದ್ದಾರೆ. ದುಬಾರಿ ಬ್ರ್ಯಾಂಡ್ ಆಲ್ಕೋಹಾಲ್ ಮತ್ತಷ್ಟು ಅಗ್ಗವಾಗಲಿದೆ. ಇದೇ ವರ್ಷದ ಆರಂಭದಲ್ಲಿ ರಾಜ್ಯ ಸರ್ಕಾರಬಿಯರ್ ಮೇಲಿನ ಎಇಡಿ ಹೆಚ್ಚಳ ಮಾಡಿತ್ತು. ಕಾಂಗ್ರೆಸ್ ಅಧಿಕಾರಕ್ಕೆ ಬಂದ ಬಳಿಕ 2023ರ ಜುಲೈ ಬಳಿಕ ಈ ಎಇಡಿ ದರ ಏರಿಕೆ ಆಗುತ್ತಲೇ ಬಂದಿದೆ.

ಇದೀಗ ಮೊದಲ ಬಾರಿಗೆ ಎಇಡಿ ಕಡಿಮೆ ಮಾಡುವ ನಿರ್ಧಾರ ಕೈಗೊಂಡಿರುವ ರಾಜ್ಯ ಸರ್ಕಾರ ಅಬಕಾರಿ ತೆರಿಗೆ ಇಳಿಕೆ ಕುರಿತು ಕರಡು ಅಧಿಸೂಚನೆ ಹೊರಡಿಸಿದೆ. ಇದಕ್ಕೇನಾದರೂ ಆಕ್ಷೇಪಣೆಗಳು, ವಿರೋಧಗಳಿದ್ದ ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಿದ್ದು, ಅದಕ್ಕಾಗಿ ಒಂದು ವಾರದ ಕಾಲಾವಕಾಶ ನೀಡಿದೆ.

## ರಸ್ತೆಗಳಲ್ಲಿ ವಾಹನ ನಿಲುಗಡೆ ನಿಷೇಧ

ಪುಟ 1ರಿಂದ

ಎರಡ್ಮೂರು ಕಾರು ಹೊಂದಿರುವವರು ಕೂಡಾ ಇಲ್ಲಿ ವಾಹನ ನಿಲುಗಡೆ ಮಾಡಲು ಅವಕಾಶ ಕಲ್ಪಿಸಲಾಗುತ್ತಿದೆ. ಬೆಂಗಳೂರು ಡಿಸಿ ಹಾಗೂ ಪೊಲೀಸ್ ಆಯುಕ್ತರು ಸೇರಿ ಗಾಂಧಿನಗರದ ಪ್ರಮುಖ ರಸ್ತೆಗಳಲ್ಲಿ ಸುಮಾರು 1 ಕಿ.ಮೀ ವ್ಯಾಪ್ತಿಯಲ್ಲಿ ವಾಹನ ನಿಲುಗಡೆ ನಿರ್ಬಂಧ ಮಾಡಲಾಗಿದೆ. ಇಲ್ಲಿನ ರಸ್ತೆ? ವಿಶಾಲವಾಗಿರಬೇಕು. ಎಲ್ಲಾ ವ್ಯಾಪಾರಿಗಳಿಗೆ ಲಾಭವಾಗಬೇಕು ಎಂದು ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದರು.

ನಗರದ ಯಾವುದೇ ಭಾಗದಿಂದ ಜನ ತಮ್ಮ ವಾಹನದಲ್ಲಿ ಬಂದರೂ ಇಲ್ಲಿ ಅವರು ವಾಹನ ನಿಲುಗಡೆ ಮಾಡಬಹುದು. ವಿಧಾನಸೌಧ, ಹೈಕೋರ್ಟ್, ರೈಲ್ವೆ ನಿಲ್ದಾಣ ಸೇರಿದಂತೆ ಗಾಂಧಿ ನಗರದ ಸುತ್ತಮುತ್ತಲಿನ ಪ್ರದೇಶಕ್ಕೆ? ಹೋಗಲು ಗುತ್ತಿಗೆದಾರರು ಉಚಿತ ಸಂಚಾರಿ ವ್ಯವಸ್ಥೆ? ಮಾಡುವುದಾಗಿ ಹೇಳಿದ್ದಾರೆ. ಗಾಂಧಿ ನಗರದಲ್ಲಿ ಸಚಿವ ದಿನೇಶ್ ಗುಂಡೂರಾವ್ ಮುಖಂಡತ್ವದಲ್ಲಿ ಈ ಯೋಜನೆ ಜಾರಿ ಮಾಡಲಾಗಿದೆ. ಗಾಂಧಿನಗರಕ್ಕೆ ಮಧ್ಯಮ ವರ್ಗದ ಜನ ಹೆಚ್ಚಾಗಿ ಬರುತ್ತಾರೆ.

ಹೀಗಾಗಿ ವಾಹನ ನಿಲುಗಡೆ ಸಮಸ್ಯೆ? ಎದುರಾಗುತ್ತಿತ್ತು. ಈಗ ಅದಕ್ಕೆ ಪರಿಹಾರ ನೀಡಲಾಗುತ್ತಿದೆ ಎಂದು ಹೇಳಿದರು.

## ರಾಜ್ಯದಲ್ಲಿ ಎಲೆಕ್ಟ್ರಿಕ್ ಬೈಕ್ ತಯಾರಿಕಾ ಘಟಕ ಸೇರಿ 64 ಸಂಸ್ಥೆಗಳಿಂದ ಹೂಡಿಕೆ

ಪುಟ 1ರಿಂದ

ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ 64 ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಆ ಮೂಲಕ ರಾಜ್ಯದಲ್ಲಿ 3,587 ಕೋಟಿ ರೂ ಬಂಡವಾಳ ಹೂಡಿಕೆಯಾಗಲಿದೆ. ಜೊತೆಗೆ 13,896 ಜನರಿಗೆ ಉದ್ಯೋಗ ಅವಕಾಶಗಳು ಸೃಷ್ಟಿಯಾಗಲಿವೆ.

ಅನುಮೋದನೆ ಪಡೆದ ಯೋಜನೆಗಳಲ್ಲಿ ವಿದ್ಯುತ್ ಚಾಲಿತ ದ್ವಿಚಕ್ರ ವಾಹನ ತಯಾರಿಕಾ ಘಟಕ, ಸಂಶೋಧನೆ ಹಾಗೂ ಅಭಿವೃದ್ಧಿ ಕೇಂದ್ರ, ವಿದ್ಯುತ್ ಉತ್ಪಾದನಾ ಕೇಂದ್ರ ಹಾಗೂ ಹಾಲು ಉತ್ಪಾದನಾ ಘಟಕಗಳು ಸೇರಿವೆ. ಸಭೆಯಲ್ಲಿ ಕೈಗೊಂಡ ನಿರ್ಧಾರಗಳಿಂದ ಬೆಂಗಳೂರು ನಗರ ಹಾಗೂ ಗ್ರಾಮಾಂತರ, ಬೆಳಗಾವಿ, ತುಮಕೂರು, ಯಾದಗಿರಿ, ಹಾವೇರಿ, ಗದಗ, ಮೈಸೂರು ಜಿಲ್ಲೆಗಳಲ್ಲಿ ಕೈಗಾರಿಕೆಗಳ ಬೆಳವಣಿಗೆಗೆ ಇನ್ನಷ್ಟು ಉತ್ತೇಜನ ದೊರೆಯಲಿದೆ. ಇಂಟರ್‌ನ್ಯಾಷನಲ್ ಬ್ಯಾಟರಿ ಕಂಪನಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ದೇವನಹಳ್ಳಿ ಬಳಿ 390 ಕೋಟಿ ವೆಚ್ಚದಲ್ಲಿ ಸ್ಥಾಪಿಸಲಿರುವ ಪ್ರೈಮರಿ ಸೆಲ್ಸ್ ಆ?ಯಂಡ್ ಬ್ಯಾಟರೀಸ್ ಘಟಕವು 300 ಜನರಿಗೆ ಉದ್ಯೋಗ ಅವಕಾಶ ಕಲ್ಪಿಸಲಿದೆ. ಬೆಂಗಳೂರು ಮೂಲದ ರಿವರ್ ಮೊಬಿಲಿಟಿ ಪ್ರೈವೇಟ್ ಲಿಮಿಟೆಡ್ ನವೋದ್ಯಮವು ಹೊಸಕೋಟೆ ಬಳಿ 306.9 ಕೋಟಿ ವೆಚ್ಚದಲ್ಲಿ ವಿದ್ಯುತ್‌ಚಾಲಿತ ದ್ವಿಚಕ್ರ ವಾಹನ ತಯಾರಿಕಾ ಘಟಕ ಸ್ಥಾಪಿಸಲಿದೆ. ಇದರಿಂದ 690 ಜನರಿಗೆ ಉದ್ಯೋಗ ಅವಕಾಶಗಳು ದೊರೆಯಲಿವೆ. ವೆಗಾ ಆಟೊ ಆ?ಯಕ್ಸೆಸರೀಸ್ ಪ್ರೈವೇಟ್ ಲಿಮಿಟೆಡ್ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನಲ್ಲಿ ಇಪಿಎಸ್ ಲೀನರ್ ತಯಾರಿಕಾ ಘಟಕ ಸ್ಥಾಪಿಸಲು 205 ಕೋಟಿ ವೆಚ್ಚ ಮಾಡಲಿದೆ. ಮಿರ್ರಾ ಆ?ಯಂಡ್ ಮಿರ್ರಾ ಇಂಡಸ್ಟ್ರೀಸ್ ತುಮಕೂರು ಜಿಲ್ಲೆಯ ವಸಂತನರಸಾಪುರದಲ್ಲಿ ಉಕ್ಕಿನ ತಂತಿ ಸಂಸ್ಕರಣಾ ಘಟಕ ಸ್ಥಾಪಿಸಲು 200 ಕೋಟಿ ವೆಚ್ಚ ಹೂಡಿಕೆ ಮಾಡಲಿರುವ ಪ್ರಮುಖ ಯೋಜನೆಗಳಾಗಿವೆ.

ದಲಿತ ಉದ್ಯಮಿಗಳ ಸಮಸ್ಯೆ ಇತ್ಯರ್ಥಕ್ಕೆ ಉನ್ನತ ಮಟ್ಟದ ಸಮಿತಿ-ಸಚಿವ ಎಂ.ಬಿ.ಪಾಟೀಲ್:

ರಾಜ್ಯದ ದಲಿತ ಉದ್ಯಮಿಗಳು ಎದುರಿಸುತ್ತಿರುವ ನಾನಾ ಸಮಸ್ಯೆಗಳನ್ನು ಪರಿಹರಿಸುವ ಉದ್ದೇಶದಿಂದ ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ನೇತೃತ್ವದಲ್ಲಿ ಉನ್ನತ ಮಟ್ಟದ ಸಮಿತಿ ರಚಿಸಲಾಗುವುದು ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದರು. ಖನಿಜ ಭವನದಲ್ಲಿ ಶುಕ್ರವಾರ ನಡೆದ ರಾಜ್ಯಸಭೆ ಮಾಜಿ ಸದಸ್ಯ ಎಲ್.ಹನುಮಂತಯ್ಯ ಅಧ್ಯಕ್ಷತೆಯ ಕರ್ನಾಟಕ ದಲಿತ ಉದ್ದಿಮೆದಾರರ ಸಂಘದ ಸದಸ್ಯರ ಜತೆ ನಡೆದ ಸಭೆಯಲ್ಲಿ ಸಚಿವರು ಈ ಘೋಷಣೆ ಮಾಡಿದರು. ದಲಿತ ಉದ್ದಿಮೆದಾರರು ಎದುರಿಸುತ್ತಿರುವ ನಾನಾ ಸಮಸ್ಯೆಗಳನ್ನು ಆಲಿಸುವುದು ಮತ್ತು ಅದಕ್ಕೆ ಪರಿಹಾರ ಕಂಡುಹಿಡಿಯುವ ಕೆಲಸವನ್ನು ಈ ಸಮಿತಿ ಮಾಡಲಿದೆ ಎಂದು ಹೇಳಿದರು. ನಿಯಮಗಳ ಪ್ರಕಾರ ರಾಜ್ಯದ ಕೈಗಾರಿಕಾ ಪ್ರದೇಶಗಳಲ್ಲಿ ದಲಿತ ಉದ್ದಿಮೆದಾರರಿಗೆ ಶೇಕಡ 24.10ರಷ್ಟು ಕೈಗಾರಿಕಾ ನಿವೇಶನಗಳನ್ನು ಹಂಚಲು ಸರ್ಕಾರ ಬದ್ಧವಾಗಿದೆ. ಇದರಂತೆ, ವಿವಿಧ ಕೈಗಾರಿಕಾ ಪ್ರದೇಶಗಳಲ್ಲಿ ಇನ್ನೂ 391 ಎಕರೆಯಷ್ಟು ಜಾಗವನ್ನು ಪರಿಶಿಷ್ಟರಿಗೆ ಹಂಚುವುದು ಬಾಕಿ ಇದ್ದು, ಆದಷ್ಟು ಬೇಗ ಹಂಚಿಕೆ ಮಾಡಲಾಗುವುದು. ಕೋವಿಡ್ ಪೂರ್ವದಲ್ಲಿ ಹಂಚಿಕೆಯಾಗಿರುವ ಫಲಾನುಭವಿಗಳಿಗೆ ಯೋಜನೆ ಜಾರಿ ಮತ್ತು ಹಣ ಪಾವತಿಗೆ ಈ ಹಿಂದೆ ಒಂದು ವರ್ಷ ನೀಡಿದ್ದ ವಿನಾಯಿತಿಯನ್ನು ಸಚಿವರು ಉದ್ದಿಮೆದಾರರ ಮನವಿ ಮೇರೆಗೆ ಎರಡು ವರ್ಷಗಳ ವಿನಾಯಿತಿ ನೀಡಿದರು.

ಹಳೇ ಕೈಗಾರಿಕಾ ಪ್ರದೇಶಗಳಲ್ಲಿ ಹಂಚಿಕೆಯಾಗದೆ ಉಳಿದಿರುವ ನಿವೇಶನಗಳ ಪೈಕಿ ಶೇ.25ರಷ್ಟು ನಿವೇಶನಗಳನ್ನು ಪರಿಶಿಷ್ಟರಿಗೆ ಹಂಚಿಕೆ ಮಾಡಲಾಗುವುದು ಎಂದೂ ಸಚಿವರು ಸಭೆಗೆ ತಿಳಿಸಿದರು. ಕೆಲವು ಸಂದರ್ಭಗಳಲ್ಲಿ ದಲಿತ ಉದ್ದಿಮೆದಾರರ ಯೋಜನಾ ಪ್ರಸ್ತಾವನೆಗಳ ಸ್ವರೂಪ ಬದಲಾದಂತೆ ನಿಗದಿತ ಪ್ರಮಾಣಕ್ಕಿಂತ ಕಡಿಮೆ ಕೈಗಾರಿಕಾ ನಿವೇಶನ ಕೊಡಲಾಗಿದೆ. ಇಂತಹ ಪ್ರಕರಣಗಳಲ್ಲಿ ಹೂಡಿಕೆಯು 15 ಕೋಟಿ ರೂ.ಗಳಿಗಿಂತ ಕಡಿಮೆಯಾಗಿದ್ದಲ್ಲಿ ಅಂತಹ ಪ್ರಕರಣಗಳನ್ನು ಆಯಾ ಜಿಲ್ಲಾಧಿಕಾರಿಗಳ ನೇತೃತ್ವದ ಸಮಿತಿಗೆ ವಹಿಸುವ ಬಗ್ಗೆ ಕ್ರಮವಹಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ದಾಬಸ್ ಪೇಟೆ, ಹಾಸನ, ಬಿಡದಿ ಸೇರಿದಂತೆ ಹಲವೆಡೆಗಳಲ್ಲಿ ಪರಿಶಿಷ್ಟರಿಗೆ ಕೊಟ್ಟಿರುವ ನಿವೇಶನಗಳಲ್ಲಿ ಸಮಸ್ಯೆ ಇದ್ದು, ಅದನ್ನು ಆದಷ್ಟು ಬೇಗ ಪರಿಹರಿಸುವ ಬಗ್ಗೆ ಕ್ರಮವಹಿಸಲಾಗಿದೆ ಎಂದರು.

ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ, ಕೆಐಎಡಿಬಿ ಸಿಇಒ ಡಾ.ಆರ್. ಮಹೇಶ, ಕೈಗಾರಿಕಾ ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ, ಕರ್ನಾಟಕ ಉದ್ಯೋಗ ಮಿತ್ರ ವ್ಯವಸ್ಥಾಪಕ ನಿರ್ದೇಶಕ ದೊಡ್ಡ ಬಸವರಾಜ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು. ದಲಿತ ಮುಖಂಡರಾದ ಮಾವಳ್ಳಿ ಶಂಕರ್, ಇಂದೂಧರ ಹೊನ್ನಾಪುರ ಸೇರಿದಂತೆ ಇತರರು ಇದ್ದರು.

## ಅಂಗನವಾಡಿ ಆಹಾರದಲ್ಲಿ ಗುಣಮಟ್ಟ ಕಾಪಾಡಿ

ಪುಟ 1ರಿಂದ

ಸಚಿವರು, ಇಲಾಖೆಯ ಯೋಜನೆಗಳ ಜಿಲ್ಲಾವಾರು ಕಾರ್ಯಕ್ರಮಗಳ ಕುರಿತು ಮಾಹಿತಿ ಪಡೆದರು.

ಅಂಗನವಾಡಿ ಕೇಂದ್ರಗಳಿಗೆ ಆಹಾರ ಪೂರೈಸಲಾಗುತ್ತಿರುವ ಎಂಎಸ್ಪಿಸಿ ಕೇಂದ್ರಗಳಿಗೆ ಖುದ್ದು ಭೇಟಿ ನೀಡಿ, ಆಹಾರ ಪದಾರ್ಥಗಳ ಗುಣಮಟ್ಟವನ್ನು ಪರಿಶೀಲಿಸಬೇಕು. ಪೋಷಣ್ ಯೋಜನೆಯಡಿ ಹೆಚ್ಚು ಮಕ್ಕಳನ್ನು ನೋಂದಾಯಿಸಲು ತ್ವರಿತ ಕ್ರಮಕೈಗೊಳ್ಳಬೇಕು ಎಂದು ಸಚಿವರು ಸೂಚಿಸಿದರು.

ಮಳೆಗಾಲದ ಹಿನ್ನೆಲೆಯಲ್ಲಿ ಅಂಗನವಾಡಿ ಕೇಂದ್ರಗಳ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಡಬೇಕು. ಟಿಸಿ, ಮರ, ಗಿಡಗಳಿದ್ದರೆ ತೆರವುಗೊಳಿಸಬೇಕು. ಜಿಲ್ಲಾ ಮಟ್ಟದ ಅಧಿಕಾರಿಗಳು ತಾಲೂಕು ಮಟ್ಟದ ಶಿಶು ಸಂಯೋಜನಾಧಿಕಾರಿಗಳು (ಸಿಡಿಪಿಒ), ಪರಿವೀಕ್ಷಣಾ ಅಧಿಕಾರಿಗಳ ಜೊತೆ ಸಮನ್ವಯ ಸಾಧಿಸಿ, ಅಂಗನವಾಡಿ ಕೇಂದ್ರಗಳ ಅಭಿವೃದ್ಧಿಗೆ ಕ್ರಮಕೈಗೊಳ್ಳಬೇಕು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಅಂಗನವಾಡಿ ಕಾರ್ಯಕರ್ತೆಯರ ಬಹುದಿನಗಳ ಬೇಡಿಕೆಯಾಗಿದ್ದ ಗ್ರಾಚ್ಯುಟಿ ಮೊತ್ತವನ್ನು ಬಿಡುಗಡೆ ಮಾಡಲು ಕ್ರಮಕೈಗೊಳ್ಳಲಾಗಿದೆ. ಇದರಿಂದ ಸುಮಾರು 2,537 ಕಾರ್ಯಕರ್ತೆಯರಿಗೆ ಆರ್ಥಿಕವಾಗಿ ನೆರವಾಗಲಿದೆ. ಇದಕ್ಕಾಗಿ 29.91ಕೋಟಿ ರೂಪಾಯಿ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ ಎಂದರು.

ಗ್ರಾಮಾಂತರ ಭಾಗದಲ್ಲಿ ಆಗುತ್ತಿರುವ ಬಾಲ್ಯವಿವಾಹ ತಡೆಗಟ್ಟಲು ತೆಗೆದುಕೊಂಡಿರುವ ಕಾರ್ಯಕ್ರಮಗಳ ಮಾಹಿತಿ ಪಡೆದ ಸಚಿವರು, ಇನ್ಮುಂದೆ ರಾಜ್ಯದಲ್ಲಿ ಬಾಲ್ಯ ವಿವಾಹ ಆಗದಂತೆ ಎಚ್ಚರಿಕೆ ವಹಿಸಬೇಕು ಎಂದರು.

ಈ ವೇಳೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ಡಾ.ಜಿ.ಸಿ.ಪ್ರಕಾಶ್, ನಿರ್ದೇಶಕರಾದ ಎನ್.ಸಿದ್ದೇಶ್ವರ್, ವಿಶೇಷಾಧಿಕಾರಿ ಬಿ.ಎಚ್. ನಿಶ್ಚಲ್ ಸೇರಿದಂತೆ ಇಲಾಖೆಯ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶನಿವಾರ 22 ಜೂನ್ 2024
SATURDAY 22 June 2024

# ಶಾಲಾ ಕಾಲೇಜುಗಳಲ್ಲಿ ಯೋಗಾಭ್ಯಾಸಕ್ಕೆ ಹೊಸ ರೂಪ: ರಾಜ್ಯಪಾಲರು



ಬೆಂಗಳೂರು: ಅಂತಾರಾಷ್ಟ್ರೀಯ 10ನೇ ಯೋಗ ದಿನಾಚರಣೆಯ ಅಂಗವಾಗಿ ವಿಧಾನಸೌಧದ ಪೂರ್ವ ದ್ವಾರದಲ್ಲಿ ಆಯೋಜಿಸಲಾಗಿದ್ದ ಯೋಗಾಭ್ಯಾಸದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಗವಹಿಸಿದ್ದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್, ವಿಧಾನ ಪರಿಷತ್ ಸದಸ್ಯ ಟಿ.ಎ.ಶರವಣ, ನಟ ಶರಣ್, ನಟಿ ಅನುಪ್ರಭಾಕರ್, ಕ್ರಿಕೆಟರ್ ಮನೀಷ್ ಪಾಂಡೆ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಡಿ.ಕೆ. ಶಿವಕುಮಾರ್ ಮಾತನಾಡಿ, ಐದು ಸಾವಿರ ವರ್ಷಗಳ ಇತಿಹಾಸ ಇರುವ ಯೋಗವನ್ನು ಇಡೀ ವಿಶ್ವವೇ ಒಪ್ಪಿಕೊಂಡಿದೆ. ನಮ ಧರ್ಮ, ಸಂಸ್ಕೃತಿ, ಪದ್ಧತಿಗೆ ಜಾಗತಿಕ ಮಾನ್ಯತೆ ದೊರೆತಿದೆ. ಹಿರಿಯರು ಮಹಾ ಋಷಿಗಳು ಯೋಗಕ್ಕೆ ಬುನಾದಿ ಹಾಕಿಕೊಟ್ಟಿದ್ದಾರೆ. ಜಾತಿ ಧರ್ಮ, ಪ್ರದೇಶ ಮೀರಿ ಯೋಗ ಬೆಳೆಯುತ್ತಿದೆ ಎಂದರು.

ನನಗೆ ಯೋಗ ಮಾಡಿ ಅಭ್ಯಾಸ ಇಲ್ಲ. ಶಾಲಾ ದಿನಗಳಲ್ಲಿ ಕ್ರೀಡೆಯಲ್ಲಿ ತೊಡಗಿಸಿಕೊಂಡಿದ್ದೆ. ಈಗ ನಮ ಮನೆಯಲ್ಲಿ ಶ್ರೀಮತಿಯವರು ಯೋಗ ಅಭ್ಯಾಸ ಮಾಡುತ್ತಾರೆ. ಇನ್ನು ಮುಂದೆ ನಾನು ಯೋಗಾಭ್ಯಾಸ ಮಾಡುತ್ತೇನೆ. ಸಚಿವ ದಿನೇಶ್ ಒಬ್ಬ ಯೋಗ ಗುರುವನ್ನು ಕಳುಹಿಸುವುದಾಗಿ ತಿಳಿಸಿದ್ದಾರೆ ಎಂದರು.

ಇದು ನಮ ಆಸ್ತಿ, ಇದಕ್ಕೆ ಪ್ರೋತ್ಸಾಹ ನೀಡಬೇಕಿದೆ. 10 ದಿನಗಳ ಕಾಲ ಕ್ರೀಡಾಪಟುಗಳು ಹಾಗೂ ಸಿನಿಮಾ ನಟರನ್ನು ಕರೆಸಿ ಯೋಗಾಭ್ಯಾಸದ ಮೂಲಕ ಪ್ರೋತ್ಸಾಹ ನೀಡುತ್ತಿರುವ ಆರೋಗ್ಯ ಇಲಾಖೆಯ ಕಾರ್ಯ ಶ್ಲಾಘನಾರ್ಹ. ಎಲ್ಲರೂ ಹೆಚ್ಚು ಆರೋಗ್ಯವಂತರಾಗಿ, ಹೆಚ್ಚು ದಿನ ಬಾಳಿ ಎಂದು ಹಾರೈಸಿದರು. ದೈಹಿಕ ಹಾಗೂ ಮಾನಸಿಕ ಆರೋಗ್ಯ ರಕ್ಷಣೆಗೆ ಯೋಗ ಅಗತ್ಯ ಇದೆ. ಯೋಗ ಕುರಿತು ಹೆಚ್ಚು ಪ್ರಚಾರ ಮಾಡಬೇಕಿದೆ. ಶಾಲಾ ಕಾಲೇಜುಗಳಲ್ಲಿ ಪ್ರತಿನಿತ್ಯ ಅಥವಾ ವಾರಕ್ಕೆ ಕೆಲ ತರಗತಿಗಳನ್ನು ಯೋಗ ಅಭ್ಯಾಸ ಮಾಡುವ ಕುರಿತು ಚರ್ಚೆ ನಡೆಯುತ್ತಿದೆ. ಆಯುಷ್ ಇಲಾಖೆಯಿಂದ ಇದಕ್ಕೆ ಹೊಸ ರೂಪ ಒದಗಿಸಿಕೊಡಲಾಗುತ್ತದೆ. ಹಿರಿಯರಾಗಿರಲಿ, ಕಿರಿಯರಾಗಿರಲಿ ಪ್ರತಿಯೊಬ್ಬರು ಯೋಗಾಭ್ಯಾಸ ಮಾಡಿ ಆರೋಗ್ಯದಿಂದ ಇರಲಿ ಎಂದರು.ಶರಣ್ ಮಾತನಾಡಿ, ಯೋಗ ದೈಹಿಕ ಆರೋಗ್ಯಕ್ಕಷ್ಟೆ ಅಲ್ಲ, ಮಾನಸಿಕವಾಗಿಯು ನಮನ್ನು ಸದೃಢವಾಗಿಸಿ, ಆರೋಗ್ಯಕರ ಜೀವನ ಸಾಗಿಸಲು ಸಹಾಯ ಮಾಡುತ್ತದೆ. ದಿನ ನಿತ್ಯದ ಜೀವನದಲ್ಲಿ ಪ್ರತಿಯೊಬ್ಬರು ಕನಿಷ್ಠ ಅರ್ಧ ಅಥವಾ ಒಂದು ಗಂಟೆ ಯೋಗಾಭ್ಯಾಸ ಮಾಡಬೇಕು ಎಂದು ಕೈ ಮುಗಿದು ಕೇಳಿಕೊಳ್ಳುತ್ತೇನೆ ಎಂದು ಹೇಳಿದರು.

ಅನುಪ್ರಭಾಕರ್ ಮಾತನಾಡಿ, ಸಮಾಜದಲ್ಲಿ ಹೆಚ್ಚಿನ ಹಿಂಸೆ, ನೋವು, ಅಸೂಯೆ ಸೇರಿ ನಕಾರಾತಕ ಅಂಶಗಳನ್ನೇ ನೋಡುತ್ತಿದ್ದೇವೆ. ಯೋಗಾಭ್ಯಾಸದಿಂದ ದೇಹ ಸದೃಢವಾಗಿದ್ದರೆ ಮನಸ್ಸು ಸಕಾರಾತಕ ವಾಗಿರುತ್ತದೆ. ಪ್ರತಿಯೊಬ್ಬರು ಯೋಗಾಭ್ಯಾಸ ಮಾಡಬೇಕು. ನಾನು 25 ವರ್ಷಗಳಿಂದ ಯೋಗ ಮಾಡುತ್ತಿ ದ್ದೇನೆ. ಯೋಗಾಭ್ಯಾಸವನ್ನು ಎಲ್ಲರೂ ರೂಢಿಸಿಕೊಳ್ಳಬೇಕು ಎಂದರು.ನಟ ದರ್ಶನ್ ಪ್ರಕರಣದ ಬಗ್ಗೆ ಪ್ರತಿಕ್ರಿಯೆ ಕೇಳಿದಾಗ ಶರಣ್ ಹಾಗೂ ಅನುಪ್ರಭಾಕರ್ ಉತ್ತರಿಸದೇ ತೆರಳಿದರು.

# ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಇನ್ನೂ ಹಲವರು ಭಾಗಿಯಾಗಿರುವ ಶಂಕೆ



ಬೆಂಗಳೂರು: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣ ಸಂಬಂಧ ಇದುವರೆಗೂ 17 ಆರೋಪಿಗಳನ್ನು ಬಂಧಿಸಿರುವ ಪೊಲೀಸರು 28 ಸ್ಥಳಗಳಲ್ಲಿ ಮಹಜರು ನಡೆಸಿ ಬರೋಬ್ಬರಿ 130ಕ್ಕೂ ಹೆಚ್ಚು ಸಾಕ್ಷ್ಯಗಳನ್ನು ಸಂಗ್ರಹಿಸಿರುವುದು ತಿಳಿದುಬಂದಿದೆ.

ಚಿತ್ರದುರ್ಗದಿಂದ ರೇಣುಕಾಸ್ವಾಮಿಯನ್ನು ಕರೆತಂದ ಸ್ಥಳದಿಂದ ಕೊಲೆಯಾದ ಪಟ್ಟಣಗೆರೆಯ ಶೆಡ್ ಹಾಗು ಮೃತದೇಹ ಪತ್ತೆಯಾದ ಸುಮನಹಳ್ಳಿಯ ರಾಜಕಾಲುವೆ, ಪಾರ್ಟಿ ಮಾಡಿದ ಹೋಟೆಲ್, ಮೈಸೂರಿನಲ್ಲಿ ದರ್ಶನ್ ತಂಗಿದ್ದ ಹೋಟೆಲ್, ಫಾರ್ಮ್ ಹೌಸ್ ಹಾಗೂ ಕೊಲೆಯಾದ ದಿನ ಆರೋಪಿಗಳು ಧರಿಸಿದ್ದಂತಹ ಬಟ್ಟೆ, ಶೂ, ಚಪ್ಪಲಿ ಹಲ್ಲೆಗೆ ಬಳಸಿದ್ದಂತಹ ವಸ್ತುಗಳು, ಆರೋಪಿಗಳ ಮೊಬೈಲ್‌ಗಳು ಸೇರಿದಂತೆ 130ಕ್ಕೂ ಹೆಚ್ಚು ಸಾಕ್ಷ್ಯಗಳನ್ನು ವಿಜಯನಗರ ಉಪವಿಭಾಗದ ಪೊಲೀಸರು ಸಂಗ್ರಹಿಸಿದ್ದಾರೆ.

ದರ್ಶನ್ ಸೇರಿದಂತೆ 17 ಆರೋಪಿಗಳ ನಿವಾಸಗಳಲ್ಲೂ ಹಾಗೂ ಪ್ರಕರಣ ಸಂಬಂಧ 11 ಪ್ರಮುಖ ಸ್ಥಳಗಳಲ್ಲಿಯೂ ಸ್ಥಳ ಮಹಜರು ಮಾಡಿ ಹಲವು ಸಾಕ್ಷ್ಯಗಳನ್ನು ಕಲೆ ಹಾಕಿದ್ದಾರೆ. ಒಟ್ಟಾರೆ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಇನ್ನು ಹಲವರು ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದ್ದು, ತನಿಖೆ ಮುಂದುವರೆದಿದೆ.

**ಕೇಂದ್ರಬಿಂದುವೇ ಪವಿತ್ರಾಗೌಡ:**

ಈ ಪ್ರಕರಣದ ಕೇಂದ್ರಬಿಂದು ಪವಿತ್ರಗೌಡ ಎಂಬುದು ಪೊಲೀಸರ ವಿಚಾರಣೆಯಿಂದ ಬೆಳಕಿಗೆ ಬಂದಿದೆ. ರೇಣುಕಾಸ್ವಾಮಿ ಮೊಬೈಲ್‌ಗೆ ಪವಿತ್ರಾ ಗೌಡ ತನ್ನ ಮೊಬೈಲ್‌ನಿಂದ ಮೆಸೇಜ್ ಕಳುಹಿಸಿರುವುದನ್ನು ಪೊಲೀಸರು ಪತ್ತೆಹಚ್ಚಿದ್ದು, ಆಕೆಯ ಮೊಬೈಲ್‌ನಲ್ಲಿರುವ ಸಂದೇಶಗಳೇ ಈ ಪ್ರಕರಣಕ್ಕೆ ಪ್ರಮುಖ ಸಾಕ್ಷಿಯಾಗಲಿವೆ.

ರೇಣುಕಾಸ್ವಾಮಿಯನ್ನು ಅಪಹರಿಸಿಕೊಂಡು ನಗರಕ್ಕೆ ಕರೆತಂದು ಆತನಿಗೆ ಬುದ್ದಿ ಕಲಿಸಬೇಕೆಂದು ಪವಿತ್ರಗೌಡ ಪ್ರಚೋದನೆ ನೀಡಿ ಒತ್ತಡ ಹಾಕಿದ್ದರಿಂದಲೇ ಇಷ್ಟೆಲ್ಲ ರಾದ್ಧಾಂತಕ್ಕೆ ಕಾರಣವಾಗಿದೆ ಎಂಬುದು ಗೊತ್ತಾಗಿದೆ. ಹಾಗಾಗಿ ಈ ಪ್ರಕರಣದ ಪ್ರಮುಖ ಕೇಂದ್ರಬಿಂದು ಪವಿತ್ರ ಗೌಡ ಎಂಬುದು ಮೇಲ್ನೋಟಕ್ಕೆ ಕಂಡುಬರುತ್ತಿದೆ. ರೇಣುಕಾಸ್ವಾಮಿ ಮೊಬೈಲ್ ಇದುವರೆಗೂ ಪತ್ತೆಯಾಗಿಲ್ಲ. ಅವರ ಮೊಬೈಲ್ ಸಿಕ್ಕಿದರೆ ಇನ್ನಷ್ಟು ಮಾಹಿತಿಗಳು ಬಯಲಾಗಲಿದ್ದು, ದರ್ಶನ್ ಅಂಡ್ ಗ್ಯಾಂಗ್‌ಗೆ ಮತ್ತಷ್ಟು ಸಂಕಷ್ಟ ಎದುರಾಗಲಿದೆ.

**ವಿನಯ್ ಮೊಬೈಲ್ ಸಾಕ್ಷ:**

ದರ್ಶನ್ ಆಪ್ತ ವಿನಯ್ ಮೊಬೈಲ್‌ನಲ್ಲಿ ಪ್ರಮುಖ ಸಾಕ್ಷ್ಯವಿದ್ದು ಇದು ದರ್ಶನ್ ಗ್ಯಾಂಗ್‌ಗೆ ಕಂಟಕವಾಗಲಿದೆ. ವಿನಯ್ ಮೊಬೈಲ್‌ಗೆ ಯಾರು ಅದನ್ನು ಕಳುಹಿಸಿದರೆಂಬ ಬಗ್ಗೆ ಪೊಲೀಸರು ಹೆಚ್ಚಿನ ವಿವರಗಳನ್ನು ಕಲೆ ಹಾಕುತ್ತಿದ್ದಾರೆ.

**ಡೇಟಾ ರಿಟ್ರೀವ್:**

ಎಲ್ಲಾ ಆರೋಪಿಗಳ ಮೊಬೈಲ್‌ಗಳ ಡೇಟಾ ರಿಟ್ರೀವ್ ಸಂಗ್ರಹಿಸಲು ತನಿಖಾ ತಂಡ ಮುಂದಾಗಿದ್ದು, ಇದರಿಂದ ಮಹತ್ವದ ಸಾಕ್ಷ್ಯ ದೊರೆಯುವ ಸಾಧ್ಯತೆ ಇದೆ. ರಿಟ್ರೀವ್‌ನಿಂದ ಸಂಗ್ರಹಿಸುವ ಸಾಕಷ್ಟ್ಯಗಳು ದರ್ಶನ್ ಅಂಡ್ ಗ್ಯಾಂಗ್‌ಗೆ ಮುಳುವಾಗಲಿದೆ. ಸೈಬರ್ ತಜ್ಞರ ನೆರವಿನಿಂದ ಡೇಟ ರಿಟ್ರೀವ್ ಮಾಡಲಾಗುತ್ತಿದೆ. ಈ ಪ್ರಕರಣದಲ್ಲಿ ಆರೋಪಿಗಳು ವಿಚಾರಣೆ ವೇಳೆ ಸುಳ್ಳು ಹೇಳಿದ್ರೂ ಎಲ್ಲಾ ಆರೋಪಿಗಳಲ್ಲಿರುವ ಸಾಕ್ಷ್ಯಗಳನ್ನು ಸುಳ್ಳು ಎಂದು ಹೇಳಕ್ಕಾಗುವುದಿಲ್ಲ.

**ಮೂವರು ವಶಕ್ಕೆ :**

ಪಟ್ಟಣಗೆರೆ ಶೆಡ್‌ನಲ್ಲಿ ರೇಣುಕಾಸ್ವಾಮಿ ಮೇಲೆ ಹಲ್ಲೆ ಮಾಡಿದ ದೃಶ್ಯವನ್ನು ವಿಡಿಯೋ ಮಾಡಿಕೊಂಡಿದ್ದ ಮೂವರು ಪ್ರಕರಣ ಹೊರಬರುತ್ತಿದ್ದಂತೆ ನಾಪತ್ತೆಯಾಗಿದ್ದಾರೆ. ನಿನ್ನೆ ಈ ಮೂವರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಆ ವಿಡಿಯೋ ಡಿಲೀಟ್ ಮಾಡಿರುವುದು ತಿಳಿದುಬಂದಿದೆ.

# ಸಂಸದರ ನಿವಾಸಕ್ಕೆ ಪ್ರಜ್ವಲ್ ರೇವಣ್ಣನನ್ನು ಕರೆದೊಯ್ದು ಮಹಜರು



ಹಾಸನ: ಸಿಐಡಿಯಲ್ಲಿ ದಾಖಲಾದ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಜ್ವಲ್ ರೇವಣ್ಣನನ್ನು ಬೆಂಗಳೂರಿನಿಂದ ನಗರದ ಸಂಸದರ ನಿವಾಸಕ್ಕೆ ಕರೆದೊಯ್ದು ಸ್ಥಳ ಮಹಜರು ನಡೆಸಲಾಯಿತು.

ಇಲ್ಲಿನ ಆರ್.ಸಿ.ರಸ್ತೆಯಲ್ಲಿರುವ ಸಂಸದರ ನಿವಾಸದಲ್ಲಿ ಅತ್ಯಾಚಾರ ನಡೆಸಲಾಗಿದೆ ಎಂಬ ಆರೋಪದ ಹಿನ್ನಲೆಯಲ್ಲಿ ಇಂದು ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ಪ್ರಜ್ವಲ್‌ನನ್ನು ಕರೆದೊಯ್ದು ಸ್ಥಳ ಪರಿಶೀಲನೆ ಮಾಡಿದರು.

ಈ ಸಂದರ್ಭದಲ್ಲಿ ಎಫ್‌ಎಸ್‌ಎಲ್‌ನ ನಾಲ್ಕುಸಿಬ್ಬಂದಿಗಳ ತಂಡ ಹಾಗೂ ಎಸ್‌ಐಟಿ ತಂಡದ ಅಧಿಕಾರಿಗಳು ಜೊತೆಯಲ್ಲಿದ್ದರು.

ಪ್ರಜ್ವಲ್ ಸಂಸದರಾಗಿದ್ದ ಅವಧಿಯಲ್ಲಿ ಸರ್ಕಾರಿ ನಿವಾಸದಲ್ಲಿ ಅತ್ಯಾಚಾರ–ಲೈಂಗಿಕ ದೌರ್ಜನ್ಯ ನಡೆದಿತ್ತು ಎಂಬ ಆರೋಪದ ಹಿನ್ನಲೆಯಲ್ಲಿ ಇಂದು ಮತ್ತೆ ನಗರದಿಂದ ಪ್ರಜ್ವಲ್‌ನನ್ನು ಹಾಸನಕ್ಕೆ ಕರೆದೊಯ್ದ ಸ್ಥಳ ಮಹಜರು ಮಾಡಿ ನಂತರ ನಗರಕ್ಕೆ ಕರೆತಂದಿದ್ದಾರೆ.

ಈಗಾಗಲೇ 2 ಪ್ರಕರಣದಲ್ಲಿ ಎಸ್‌ಐಟಿ ಪೊಲೀಸರು ಪ್ರಜ್ವಲ್‌ನನ್ನು ವಿಚಾರಣೆ ನಡೆಸಿ ಮಾಹಿತಿ ಪಡೆದುಕೊಂಡಿದ್ದಾರೆ.

# ವಿವಿಧ ಶಾಲೆಗಳಲ್ಲಿ ಅಂತಾರಾಷ್ಟ್ರೀಯ ಯೋಗದಿನ ಆಚರಣೆ ನಡೆಯಿತು



ಯಳಂದೂರು. ತಾಲ್ಲೂಕಿನ ಯರಿಯೂರು ಉನ್ನತಿಕರಿಸಿದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ 10ನೇ ಅಂತರಾಷ್ಟ್ರೀಯ ಯೋಗ ದಿನವನ್ನು ವಿವಿಧ ಭಂಗಿಯ ಯೋಗ ಪ್ರದರ್ಶಿಸುವ ಮೂಲಕ ಆಚರಣೆ ಮಾಡಲಾಯಿತು.

ವಿದ್ಯರ್ಥಿಗಳು ಹಾಗೂ ಶಿಕ್ಷಕರು ಸಮವಸ್ತ್ರ ಧರಿಸಿ ಶಿಸ್ತಿನಿಂದ ಯೋಗಮಾಡುವುದರ ಮೂಲಕ ಯೋಗ ದಿನಾಚರಣೆಯನ್ನು ನಡೆಸಿದರು. ಈ ವೇಳೆ ದೈಹಿಕ ಶಿಕ್ಷಕರಾದ ಮಹದೇವ್ ರವರು ಮಾತನಾಡಿ ದೇಹ ಮತ್ತು ಮನಸ್ಸು ಎರಡನ್ನೂ ಸ್ವಸ್ಥವಾಗಿಡಲು ಯೋಗದಿಂದ ಸಾಧ್ಯವಿದೆ,ಯೋಗವೆಂದರೆ ಔಷಧ ರಹಿತ ಚಿಕಿತ್ಸಾ ಪದ್ಧತಿಯ ದೇಸಿ ಕ್ರಮ,ಮಿತ ಆಹಾರ ಸೇವನೆ, ಉಪವಾಸ ವ್ಯಾಯಾಮದಂತಹ ಚಿಕಿತ್ಸಾ ಕ್ರಮಗಳ ಮೂಲಕ ಮನುಷ್ಯನ ದೇಹವನ್ನು ನಿಯಂತ್ರಣ ತರಬಹುದಾಗಿದೆ. ಪ್ರತಿದಿನ ಯೋಗ ಮಾಡುವುದರಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡಬಹುದು, ಜೊತೆಗೆ ಸರಳ ಯೋಗಗಳು ನಮ್ಮ ಮನಸ್ಸನ್ನು ಉಲ್ಲಸವಾಗಿಡುತ್ತದೆ ಎಂದರು. ಶಿಕ್ಷಕ ಸುರೇಶ್ ಮಾತನಾಡಿ ಇಂದಿನ ಒತ್ತಡದ ಜೀವನದಲ್ಲಿ ಮನುಷ್ಯನ ಆರೋಗ್ಯ ಕಾಪಾಡಿಕೊಳ್ಳಲು ಯೋಗಾಭ್ಯಾಸ ಅಗತ್ಯವಾಗಿದೆ, ಯಾವುದೇ ವಯಸ್ಸಿನ ಮಿತಿಯಿಲ್ಲದೆ ಯೋಗವನ್ನು ಅಭ್ಯಾಸ ಮಾಡಿಕೊಳ್ಳಬೇಕು,

ಜಗತ್ತಿಗೆ ಯೋಗವನ್ನು ಅನಾದಿ ಕಾಲದಿಂದಲೂ ಪರಿಚಯ ಮಾಡಿ ಕೊಟ್ಟಿರುವುದು ನಮ್ಮ ಭಾರತ ದೇಶದ ಋಷಿ ಮುನಿಗಳು,

ಯೋಗದಿಂದ ಸದೃಢ ದೇಹ ಮತ್ತು ಸದೃಢ ಮನಸ್ಸು ನಿರ್ಮಾಣವಾಗುತ್ತದೆ. ಒಳ್ಳೆಯ ಜೀವನಶೈಲಿ, ಸಾತ್ವಿಕ ಆಹಾರ ಸೇವನೆ ಹಾಗೂ ಉತ್ತಮ ಚಿಂತನೆ ಮಾಡುತ್ತಾ ಕಾಯಕ ಯೋಗದ ಮೂಲಕ ಸಾರ್ಥಕವಾಗಿ ಬದುಕೋಣ ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕ ವೃಂದದವರು ಶಾಲಾ ಮಕ್ಕಳು ಹಾಜರಿದ್ದರು

ವರದಿ: ಆರ್.ಉಮೇಶ್ ಮಲಾರಪಾಳ್ಯ

# ಬಿಆರ್‌ಟಿ ಮುಖ್ಯರಸ್ತೆ ಆನೆಮತ್ತೆ ಎಂಟಿ ಜನರಲ್ಲಿ ಆತಂಕ

ಚಾಮರಾಜನಗರ: ಪ್ರಸಿದ್ಧ ಪ್ರವಾಸಿ ತಾಣವಾದ ಾಮರಾಜನಗರ ಜಿಲ್ಲೆ ಬಿಳಿಗಿರಿರಂಗನ ಬೆಟ್ಟದ ಮುಖ್ಯ ರಸ್ತೆಯಲ್ಲಿ ಸಲಗವೊಂದು ದಿಢೀರ್ ಎಂಟ್ರಿ ಕೊಟ್ಟು ಜನರನ್ನು ಆತಂಕಕ್ಕೆ ಈಡು ಮಾಡಿದೆ.



ಬಿಳಿಗಿರಿ ರಂಗನಾಥ ಬೆಟ್ಟದ ಬಂಗ್ಲೆ ಪೋಡು, ಐಬಿ ಬಳಿ ಆನೆ ದಿಢೀರ್ ಪ್ರತ್ಯಕ್ಷವಾಗಿ ಓಡಾಡಿ ಸ್ಥಳೀಯರಿಗೆ ಆತಂಕ ಉಂಟು ಮಾಡಿದೆ. ಹಲಸಿನ ಆಸೆಗೆ ಆನೆ ಪೋಡುಗಳತ್ತ ಬರುತ್ತಿದ್ದು ಕೆಲವು ದಿನಗಳ ಹಿಂದೆಯಷ್ಟೇ ಇದೇ ರಸ್ತೆಯಲ್ಲಿ ಬಸ್ ನ್ನು ಕೂಡ ಹಿಮ್ಮೆಟ್ಟಿಸಿತ್ತು. ಈಗ ಮತ್ತೇ ಪೋಡುಗಳತ್ತ ಬಂದು ಸ್ಥಳೀಯರಿಗೆ ಭೀತಿ ಹುಟ್ಟಿಸಿದೆ. ಕೆ.ಗುಡಿ ಜಂಗಲ್ ರೆಸ್ಸಾರ್ಟ್ಗೆ ಏಕಾಏಕಿ ಬಾರಿ ಗಾತ್ರದ ಕಾಡಮ್ಮೆಯೊಂದು ದಿಢೀರನೆ ಬಂದು ಕೆಲಕಾಲ ಎಲ್ಲರನ್ನು ಬೆಚ್ಚಿ ಬೀಳಿಸಿದೆ. ದಿನನಿತ್ಯ ಜಿಂಕೆ ನವಿಲು ಸಾಕಾನೆ ನೋಡುತ್ತಿದ್ದ ಪ್ರವಾಸಿಗರಿಗೆ ಇಂದು ಏಕಾಏಕಿ ಕಾಡಮ್ಮೆ ಎಂಟ್ರಿಯಿಂದ ಕೆಲ ಹೊತ್ತು ಆತಂಕಕ್ಕಿಡಾಗುವ ಪರಿಸ್ಥಿತಿ ನಿರ್ಮಾಣವಾಗಿ ಎಲ್ಲ ರೆಸ್ಸಾರ್ಟ್ ಸೇರುವಂತ್ತಾಗಿದೆ. ಅನಾಹುತ ಸಂಭವಿಸುವ ಮುನ್ನ ಅರಣ್ಯ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕಿದೆ.

ವರದಿ: ಮಹದೇವಪ್ರಸಾದ್ ಹಂಗಳ

# ವಿದ್ಯಾರ್ಥಿಗಳಿಗೆ ಯೋಗ ದೈಹಿಕ ಮಾನಸಿಕವಾಗಿ ಸದೃಢನನ್ನಾಗಿ ಮಾಡುತ್ತದೆ

ಯೋಗವು ನಿಮ್ಮ ಮನಸ್ಸು ಮತ್ತು ದೇಹವನ್ನು ಪುನರುಜ್ಜೀವನಗೊಳಿಸುವ ಸಾಮರ್ಥ್ಯವನ್ನು ಹೊಂದಿದೆ. ಪ್ರತಿದಿನ ಯೋಗ ಮಾಡುವ ಜನರು ಯೋಗದ ಅವಧಿಯ ನಂತರ ಚೈತನ್ಯವನ್ನು ಅನುಭವಿಸುತ್ತಾರೆ ಎಂದು ಹಿರಿಯ ಉಪನ್ಯಾಸಕರಾದ ಎಸ್ ಜಿ ಲಕ್ಕುಂಡಿಮಠ ಮಾತನಾಡಿದರು.

ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದ ವಿ ವಿ ಎಸ್ ಕಾಲೇಜು (HS) ಯೋಗ ದಿನಾಚರಣೆಯನ್ನು ಆಚರಿಸಲಾಯಿತು. ಯೋಗವು ವಿದ್ಯಾರ್ಥಿಗಳಿಗೆ ಶಿಸ್ತುಬದ್ಧವಾಗಿರಲು ಮತ್ತು ಅವರ ಮಾನಸಿಕ ಮತ್ತು ದೈಹಿಕ ಆರೋಗ್ಯದ ಬಗ್ಗೆ ಹೆಚ್ಚು ಎಚ್ಚರವಾಗಿರಲು ಕಲಿಸುತ್ತದೆ ಪ್ರಾಚಾರ್ಯರಾದ ಎಂ ಎ ಹಿರೇಮಠ್ ಮಾತನಾಡಿದರು. ಈ ಸಂದರ್ಭದಲ್ಲಿ ಎಸ್ ಎ ವಾಲಿಕಾರ ಎಂ ಜಿ ಕುಲಕರ್ಣಿ ನಿವೇದಿತಾ ಹಿರೇಮಠ್ ಧರೆಪ್ಪ ಸಿದ್ನಾಥ ನವೀನ್ ಹಿರೇಮಠ್ ವಿದ್ಯಾರ್ಥಿಗಳು ಇದ್ದರು. ಕಾರ್ಯಕ್ರಮವನ್ನು ಐ ಕೆ ನದಾಫ್ ನಿರೂಪಿಸಿದರು ಜಿ ಎಸ್ ಹಿರೇಮಠ್ ವಂದಿಸಿದರು.



# ಕಟ್ಟಡದ ಸೆಂಟ್ರಿಂಗ್ ಕುಸಿದು.. ಇಬ್ಬರಿಗೆ ಗಾಯ...!



ಹೊಸನಗರ : ಪಟ್ಟಣದ ಚೌಡಮ್ಮ ರಸ್ತೆಯ ಕಳ್ಳರು ಸೇವಾ ಸಹಕಾರ ಬ್ಯಾಂಕಿನ ನೂತನ ಕಟ್ಟಡ ನಿರ್ಮಾಣಕ್ಕೆ ಕಾಂಕ್ರೀಟ್ ನಡೆಯುತ್ತಿದ್ದು ಇಂದು ಸಂಜೆ ಕಟ್ಟಡದ ಒಂದು ಭಾಗದ ಸೆಂಟ್ರಿಂಗ್ ಕುಸಿದು ಬಿದ್ದ ಕಾರಣ ಇಬ್ಬರು ಕಾರ್ಮಿಕರಿಗೆ ಸಣ್ಣ ಪುಟ್ಟ ಗಾಯಗಳಾಗಿದ್ದು ಸಂಭವಿಸಲಿರಬಹುದಾದ ಭಾರಿ ದುರಂತದಿಂದ ಅದೃಷ್ಟವಶಾತ್ ಉಳಿದ ಕಾರ್ಮಿಕರ ಪಾರಾಗಿದ್ದಾರೆ ಸುಮಾರು 30ಕ್ಕೂ ಹೆಚ್ಚು ಜನ ಸ್ಲ್ಯಾಬ್ ಕಾಂಕ್ರೀಟ್ಕೆಲಸ ಮಾಡುತ್ತಿದ್ದರೆ ಎಂದು ತಿಳಿದು ಬಂದಿದೆ..

ತತ್ ತಕ್ಷಣ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳ ಸಿಬ್ಬಂದಿಗಳ ಕಾರ್ಯಾಚರಣೆ.

ದುರಂತ ಸಂಭವಿಸುತ್ತಿದ್ದಂತೆ ಸುದ್ದಿ ತಿಳಿದ ಅಗ್ನಿಶಾಮಕ ದಳದವರು ಸ್ಥಳಕ್ಕೆ ಆಗಮಿಸಿ ಕಾರ್ಯಾಚರಣೆ ನಡೆಸಿದರು...

ವರದಿ. ತನುಜ್ ಕುಮಾರ್. ಹೊಸನಗರ.....

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶನಿವಾರ 22 ಜೂನ್ 2024
SATURDAY 22 June 2024

# ಸಿಎಂ ಆಗಿಯೇ ವಿಧಾನಸಭೆಗೆ ಕಾಲಿಟ್ಟ ಚಂದ್ರಬಾಬು

ಅಮರಾವತಿ(ಆಂಧ್ರ ಪ್ರದೇಶ): ಆಂಧ್ರ ಪ್ರದೇಶದಲ್ಲಿ ವಿಧಾನಸಭೆಯ ಮೊದಲ ಅಧಿವೇಶನ ಇಂದಿನಿಂದ ಆರಂಭವಾಗಿದೆ. ನೂತನ ಮುಖ್ಯಮಂತ್ರಿ, ಟಿಡಿಪಿ ನಾಯಕ ಚಂದ್ರಬಾಬು ನಾಯ್ಡು ಎರಡೂವರೆ ವರ್ಷಗಳ ಸುದೀರ್ಘ ಅವಧಿಯ ನಂತರ ಮೊದಲ ಬಾರಿಗೆ ಸದನ ಪ್ರವೇಶಿಸಿದರು.

ನಟ ಪವನ್ ಕಲ್ಯಾಣ್ ತಮ್ಮ ರಾಜಕೀಯ ಜೀವನ ಆರಂಭಿಸಿದ ಬಳಿಕ ಮೊದಲ ಬಾರಿಗೆ ವಿಧಾನಸೌಧದ ಮೆಟ್ಟಿಲೇರಿದರು. ಹೊಸ ಉಪಮುಖ್ಯಮಂತ್ರಿ ಆಗಿಯೇ ಪವನ್ ವಿಧಾನಸಭೆಗೆ ಆಗಮಿಸಿದ್ದು ವಿಶೇಷ. ಇದೇ ವೇಳೆ, ಮಾಜಿ ಸಿಎಂ ವೈ.ಎಸ್.ಜಗನ್ ಹಿಂದಿನ ಗೇಟ್?ನಿಂದ ವಿಧಾನಸೌಧದ ಆವರಣ ತಲುಪಿದ್ದು ಗಮನ ಸೆಳೆಯಿತು!.

ರಾಜ್ಯದ 16ನೇ ವಿಧಾನಸಭೆ ಅಧಿವೇಶನ



ಬೆಳಗ್ಗೆ 9:46ಕ್ಕೆ ಶುರುವಾಯಿತು. ಹಂಗಾಮಿ ಸ್ಪೀಕರ್ ಗೋರಂಟ್ಲ ಬುಚ್ಚಯ್ಯ ಚೌಧರಿ ಎಲ್ಲ ಸದಸ್ಯರಿಗೆ ಪ್ರಮಾಣ ವಚನ ಬೋಧಿಸಿದರು. ಪ್ರಥಮವಾಗಿ ಸಭಾನಾಯಕ ಹಾಗೂ ಸಿಎಂ ಚಂದ್ರಬಾಬು ನಾಯ್ಡು ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದರು. ನಂತರ ಉಪ ಮುಖ್ಯಮಂತ್ರಿ ಪವನ್ ಕಲ್ಯಾಣ್ ಸೇರಿದಂತೆ 172 ಸದಸ್ಯರು ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಅಲಭ್ಯತೆ ಮತ್ತಿತರ ಕಾರಣಗಳಿಂದ ಮೂವರು ಶಾಸಕರು ಪ್ರಮಾಣ ಸ್ವೀಕರಿಸಲಿಲ್ಲ.

ಪ್ರತಿಜ್ಞೆಯಂತೆ ನಡೆದ ಚಂದ್ರಬಾಬು: 2021ರ ನವೆಂಬರ್ 19ರಂದು ರೈತರ ಸಮಸ್ಯೆಗಳ ಕುರಿತು ವಿಧಾನಸಭೆಯಲ್ಲಿ ಕಾವೇರಿದ ಚರ್ಚೆ ನಡೆದಿತ್ತು. ಆಗ ಆಡಳಿತಾರೂಢ ವೈಎಸ್?ಆರ್? ಕಾಂಗ್ರೆಸ್? ಪಕ್ಷದ ಮತ್ತು ವಿಪಕ್ಷ ಟಿಡಿಪಿ ಸದಸ್ಯರ ನಡುವೆ ಮಾತಿನ ಯುದ್ಧವೇ ಏರ್ಪಟ್ಟಿತ್ತು. ಇದರ ನಡುವೆ ಚಂದ್ರಬಾಬು ಮಾತನಾಡುವಾಗ ಸ್ಪೀಕರ್ ಮೈಕ್ ಆಫ್ ಮಾಡಿದ್ದರು.

ಅಲ್ಲದೇ, ಆಡಳಿತ ಪಕ್ಷದ ನಾಯಕರು ವಿಧಾನಸಭೆಯಲ್ಲಿ ತಮ್ಮ ಪತ್ನಿಗೆ ಅವಮಾನ ಮಾಡಿದ್ದಾರೆ ಎಂದು ಚಂದ್ರಬಾಬು ಗದ್ಗದಿತರಾಗಿದ್ದರು. ಅಂದೇ ವೈಎಸ್ಆರ್ ಕಾಂಗ್ರೆಸ್ ಪಕ್ಷವನ್ನು ಸೋಲಿಸುವ ಶಪಥ ಮಾಡಿದ್ದರು. ''ಸಿಎಂ ಆದ ನಂತರವೇ ಮತ್ತೆ ವಿಧಾನಸಭೆಗೆ ಬರುತ್ತೇನೆ. ಈ ರಾಜಕೀಯ ನನಗೆ ಬೇಕಾಗಿಲ್ಲ. ಇದು ಗೌರವಾನ್ವಿತ ಸಭೆಯಲ್ಲ, ಇದು ಕೌರವ ಸಭೆ. ಇಂತಹ ಕೌರವ ಸಭೆಯಲ್ಲಿ ನಾನು ಇರುವುದಿಲ್ಲ'' ಎಂದು ಹೇಳುತ್ತಾ ಹೊರಬಂದಿದ್ದರು.

ವಿಭಜಿತ ಆಂಧ್ರದ ಮೊದಲ ಸಿಎಂ ಆಗಿದ್ದ ಚಂದ್ರಬಾಬು ಎರಡೂವರೆ ವರ್ಷಗಳ ನಂತರ ಇಂದು ಮತ್ತೆ ಸಿಎಂ ಆಗಿಯೇ ಸದನಕ್ಕೆ ಬಂದರು. ಅವರನ್ನು ಶಾಸಕರು ಅದ್ದೂರಿಯಾಗಿ ಬರಮಾಡಿಕೊಂಡರು. ವಿಧಾನಸಭೆಯ ತಮ್ಮ ಚೇಂಬರ್‌ನಲ್ಲಿ ಪೂಜೆ ಸಲ್ಲಿಸಿದ ನಂತರ ಚಂದ್ರಬಾಬು, ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಚಂದ್ರಬಾಬು ಅವರನ್ನು ಅಪ್ಪಿಕೊಂಡರು. ಈ ವೇಳೆ ಸಿಎಂಗೆ ಸಚಿವರು, ಶಾಸಕರು ಅಭಿನಂದನೆ ಸಲ್ಲಿಸಿದರು.

## ಮಂಗಳವಾಡ ಗ್ರಾ.ಪಂ.ಅಧ್ಯಕ್ಷರಾಗಿ ಸಣ್ಣ ತಿಮ್ಮಯ್ಯ ಆಯ್ಕೆ




ಪಾವಗಡ: ತಾಲ್ಲೂಕಿನ ಮಂಗಳವಾಡ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ಶುಕ್ರವಾರ ನಡೆದ ಚುನಾವಣೆಯಲ್ಲಿ ಸಣ್ಣ ತಿಮ್ಮಯ್ಯ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು.

ಹಿಂದಿನ ಅಧ್ಯಕ್ಷ ಸ್ವಾರಣ್ಣ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ನಡೆದ ಚುನಾವಣೆಗೆ ಮಂಗಳವಾಡ ಕ್ಷೇತ್ರದಿಂದ ಸಣ್ಣ ತಿಮ್ಮಯ್ಯ ಮಾತ್ರ ನಾಮಪತ್ರ ಸಲ್ಲಿಸಿದ್ದರು. ಬೇರೆ ನಾಮಪತ್ರಗಳು ಸಲ್ಲಿಕೆಯಾಗದ ಕಾರಣ ತಹಶೀಲ್ದಾರ್ ಡಿ.ಎನ್.ವರದರಾಜು ಚುನಾವಣಾ ಪ್ರಕ್ರಿಯೆ ಪೂರ್ಣಗೊಳಿಸಿ ಅವಿರೋಧ ಆಯ್ಕೆ ಪ್ರಕಟಿಸಿ ಸಣ್ಣ ತಿಮ್ಮಯ್ಯಗೆ ಅಧಿಕಾರ ವಹಿಸಿಕೊಟ್ಟರು. ನೂತನ ಅಧ್ಯಕ್ಷ ಸಣ್ಣ ತಿಮ್ಮಯ್ಯ ಮಾತನಾಡಿ, ಅವಿರೋಧ ಆಯ್ಕೆಗೆ ಸಹಕರಿಸಿದ ಎಲ್ಲ ಸದಸ್ಯರಿಗೆ ಅಭಿನಂದನೆ ಸಲ್ಲಿಸಿದರು.

ನನ್ನ ಅವಧಿಯಲ್ಲಿ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಸಿಗುವಂತೆ ಕಾರ್ಯ ನಿರ್ವಹಿಸುತ್ತೇನೆ. ಗ್ರಾಮಗಳ ಸಮಸ್ಯೆಗಳ ಬಗ್ಗೆ ಗಮನಹರಿಸಿ ಅಭಿವೃದ್ಧಿಗೆ ಹೆಚ್ಚಿನ ಒತ್ತು ಕೊಡುತ್ತೇನೆ ಎಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗಂಗಾಧರಪ್ಪ, ಮಾಜಿ ಅಧ್ಯಕ್ಷ ಸ್ವಾರಣ್ಣ, ಉಪಾಧ್ಯಕ್ಷೆ ಅಂಜಲಿ, ಸದಸ್ಯರಾದ ರಂಗಸ್ವಾಮಿ, ವಡ್ಡಗೇರಮ್ಮ, ಹೆಚ್.ಗೋವಿಂದರಾಜು, ಬಲರಾಮ, ರತ್ನಮ್ಮ, ಲಕ್ಷ್ಮೀ, ಆನಂದ.ಬಿ, ದಯಾನಂದ.ಹೆಚ್, ಉಷಾ.ಕೆ, ಮಧು ಬಿ.ಎಂ, ಶಿವಮ್ಮ, ರಾಮಾಂಜಿನಮ್ಮ, ಅನಿತಮ್ಮ, ಕೆ.ಹೆಚ್.ಪ್ರೇಮ, ಮುಖಂಡರಾದ ಗೋಪಿ, ಶಿವಪ್ರಸಾದ್, ಮಂಜುನಾಥ್, ಸ್ವಾರಣ್ಣ, ತಿಪ್ಪೇಸ್ವಾಮಿ, ಪ್ರಕಾಶ್, ಎಂ.ಸಿ.ಸಣ್ಣಸ್ವಾರಪ್ಪ, ಶಂಕರಪ್ಪ ಮತ್ತಿತರರು ಇದ್ದರು.

## ನಾಡಪ್ರಭು ಕೆಂಪೇಗೌಡ ಜಯಂತಿಯ ಪೂರ್ವಭಾವಿ ಸಭೆ

ಕೊರಟಗೆರೆ:– ನಾಡಪ್ರಭು ಕೆಂಪೇಗೌಡರು ಕರ್ನಾಟಕ ರಾಜ್ಯದ ಕೇಂದ್ರ ಬಿಂದು ಬೆಂಗಳೂರನ್ನು ಕಟ್ಟಿ ಬೆಳಸಿ ರಾಜ್ಯಕ್ಕೆ ತಿಂಗಳಿಗೆ ಕೋಟ್ಯಾಂತರ ರೂ ಆಧಾಯ ಬರುವಂತೆ ಮಾಡಿದ್ದು ಅವರ ಜಯಂತಿಯನ್ನು ಸರ್ಕಾರಿ ಜಯಂತಿಯನ್ನಾಗಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ತಹಶೀಲ್ದಾರ್ ಮಂಜುನಾಥ್ ತಿಳಿಸಿದರು.

ಅವರು ಪಟ್ಟಣದ ತಾಲೂಕು ಕಛೇರಿ ಸಭಾಂಗಣದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ ಕೆಂಪೇಗೌಡರು ಬೆಂಗಳೂರು ಸೇರಿದಂತೆ ಸುತ್ತಮುತ್ತಲ

ಪ್ರದೇಶವನ್ನು ಅಭಿವೃದ್ಧಿ ಪಡಿಸಿದ್ದಾರೆ, ಬೆಂಗಳೂರಿನ ಸುಮಾರು 7.5 ಸಾವಿರ ಕೆರೆಗಳನ್ನು ಕಟ್ಟಿಸಿದ ಹಾಗೂ



ಅಭಿವೃದ್ಧಿ ಪಡಿಸಿದ ಹರಿಕಾರರು, ಇಂದು ಬೆಂಗಳೂರಿನಲ್ಲಿ ಸುಮಾರು 1 ಕೋಟಿ 90 ಲಕ್ಷ ಕ್ಕೂ ಹೆಚ್ಚು ಜನರು ನೆಮ್ಮದಿಯಾಗಿ ಎಲ್ಲಾ ಮೂಲಭೂತಸೌಕರ್ಯಗಳೊಂದಿಗೆ ವಾಸಿಸುತ್ತಿರುವುದು ಕೆಂಪೇಗೌಡರ ಅಂದಿನ ದೂರದೃಷ್ಟಿ ಹಾಗೂ ಅಭಿವೃದ್ದಿಯ ಪತದಿಂದ ಸಾಧ್ಯವಾಗಿದೆ, ಬೆಂಗಳೂರು ಇಂದು ಅಂತರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿದೆ, ವಿದೇಶಿ ಕಂಪನಿಗಳು ಬೆಂಗಳೂರಿಗೆ ಬಂದು ಸ್ಥಳೀಯ ಕೋಟ್ಯಾಂತರ ಜನರಿಗೆ ಉದ್ಯೋಗ ನೀಡಿದೆ ಅಂತರಾಷ್ಟ್ರೀಯ ಹಾಗೂ ವಿವಿಧ ರಾಜ್ಯದ ಜನರು ಇಂದು ಬೆಂಗಳೂರಿನಲ್ಲಿ ಜೀವನ ರೂಪಿಸಿಕೊಂಡಿದ್ದಾರೆ, ರಾಜ್ಯದ ಅರ್ಥದಷ್ಟು ಆಧಾಯ ಬೆಂಗಳೂರು ನೀಡುತ್ತಿದೆ, ಇಂತಹ ಅನೇಕ ಅಭಿವೃದ್ದಿಗೆ ಮತ್ತು ಅನುಕೂಲಕ್ಕೆ ಕೆಂಪೇಗೌಡರೆ ಕಾರಣ ಅವರು ಒಂದು ಜಾತಿಗೆ ಧರ್ಮಕ್ಕೆ ಸೀಮಿತವಾದವರಲ್ಲ ಅವರ ಶ್ರಮದ ಫಲದಿಂದ ಎಲ್ಲಾ ಜಾತಿ ಧರ್ಮದವರು ಅನುಕೂಲ ಪಡೆಯುತ್ತಿದ್ದಾರೆ ಇಂತಹ ಮಹಾನ್ ಸಾಧಕರ ಜಯಂತಿಯನ್ನು ತಾಲೂಕಿನ ಸಂಘ ಸಂಸ್ಥೆಗಳು ಹಾಗೂ ಗಣ್ಯರೊಂದಿಗೆ ಸರ್ಕಾರಿ ಜಯಂತಿಯನ್ನಾಗಿ ಆಚರಿಸಲಾಗುದು ಎಂದರು.

ಈ ಸಭೆಯಲ್ಲಿ ಗ್ರೇಡ್2 ತಾಹಶೀಲ್ದಾರ್ ನರಸಿಂಹಮೂರ್ತಿ, ತಾಲೂಕು ಮಟ್ಟದ ಅಧಿಕಾರಿಗಳಾದ ರವಿ, ಶಿಲ್ಪ, ರುದ್ರಪ್ಪ, ಕೀರ್ತಿನಾಯ್ಕ್, ಸುರೇಶ್,

ನಾಗಭೂಷಣ್, ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ರಂಗಅರಸಪ್ಪ, ಒಕ್ಕಲಿಗ ಜಾಗೃತಿ ಅಧ್ಯಕ್ಷ ವಿ.ಕೆ.ವೀರಕ್ಯಾತರಾಯ, ಮಾಜಿ ತುಮುಲ್ ನಿರ್ದೇಶಕ ಈಶ್ವರಯ್ಯ, ವಿವಿಧ ಪಧಾದಿಕಾರಿಗಳಾದ ಕಾಮರಾಜು, ಗಡ್ಲಹಳ್ಳಿ ಕುಮಾರ್, ದಾಸರಹಳ್ಳಿ ರಮೇಶ್, ಪ್ರಕಾಶ್, ಹನುಮಂತರಾಯಪ್ಪ, ಸಾಕರಾಜು, ರಂಗಣ್ಣ, ಉಮೇಶ್, ಹೇಮಂತ್, ರವಿಕುಮಾರ್ ಸೇರಿದಂತೆ ಇನ್ನಿತರರು ಹಾಜರಿದ್ದರು.

## ಯೋಗವು ಪ್ರಾಚೀನ ಭಾರತೀಯ ಸಂಪ್ರದಾಯದ ಅಮೂಲ್ಯ ಕೊಡುಗೆ: ಜಿ.ಗೋಪಾಲರೆಡ್ಡಿ

ಕೋಲಾರ: ಯೋಗವು ಪ್ರಾಚೀನ ಭಾರತೀಯ ಸಂಪ್ರದಾಯದ ಅಮೂಲ್ಯ ಕೊಡುಗೆ, ಯೋಗವು ದೈಹಿಕ ಮತ್ತು ಮಾನಸಿಕ ಯೋಗಕ್ಷೇಮವನ್ನು ಹೆಚ್ಚಿಸಲು ಅತ್ಯಂತ ವಿಶ್ವಾಸಾರ್ಹ ಸಾಧನವಾಗಿ ಹೊರಹೊಮ್ಮಿದೆ ಎಂದು ವ್ಯಾಲಿ ಪಬ್ಲಿಕ್ ಶಾಲೆಯ ಸಂಸ್ಥಾಪಕರಾದ ಜಿ.ಗೋಪಾಲರೆಡ್ಡಿ ರವರು ತಿಳಿಸಿದರು.

ಕೋಲಾರ ತಾಲ್ಲೂಕಿನ ನರಸಾಪುರ ಗ್ರಾಮದ ವ್ಯಾಲಿ ಪಬ್ಲಿಕ್ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಯೋಗ ದಿನಾಚರಣೆಯ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು

ಪ್ರತಿವರ್ಷ ಜೂನ್ 21 ರಂದು ಅಂತರರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಗುತ್ತದೆ. ಭಾರತ ಮಾತ್ರವಲ್ಲದೇ ವಿವಿಧ ದೇಶಗಳಲ್ಲಿ ಯೋಗ ದಿನಾಚರಣೆ ರೂಢಿಯಲ್ಲಿದೆ. ?ನಮಗಾಗಿ ಹಾಗೂ ಸಮಾಜಕ್ಕಾಗಿ ಯೋಗ? ಎನ್ನುವುದು ಈ ವರ್ಷ ಥೀಮ್ ಆಗಿದೆ. ಯೋಗವು ವೈಯಕ್ತಿಕ ಆರೋಗ್ಯ ಮಾತ್ರವಲ್ಲದೇ, ಸಾಮಾಜಿಕ ಯೋಗಕ್ಷೇಮಕ್ಕೂ ಕೊಡುಗೆ ನೀಡುತ್ತದೆ ಎಂದರು

ದೈಹಿಕ ಶಿಕ್ಷಣ ಶಿಕ್ಷಕ ಮುರಳಿ. ಆರ್ ಮಾತನಾಡಿ ಬದಲಾದ ಜೀವನ ಶೈಲಿಯಿಂದ ಜನರಲ್ಲಿ ಆರೋಗ್ಯದ ಸಮಸ್ಯೆಗಳು ಸಾಮಾನ್ಯವಾಗಿದೆ. ಹೀಗಾಗಿ ಆರೋಗ್ಯವನ್ನು ಉತ್ತಮವಾಗಿಸಲು ಯೋಗ ಅತಿ ಮುಖ್ಯ. ಸರ್ವ ರೋಗಗಳಿಗೂ ಯೋಗ ಮದ್ದಾಗಿದ್ದು ಇದನ್ನು ದಿನನಿತ್ಯ ಮಾಡುವುದರ ಮೂಲಕ ಆರೋಗ್ಯ ವೃದ್ಧಿಸಿಕೊಳ್ಳಬೇಕು. ನಮ್ಮ ಪೂರ್ವಜರು ನೀಡಿರುವ ಯೋಗವನ್ನು ಉಳಿಸಿ ಬೆಳಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವ್ಯಾಲಿ ಪಬ್ಲಿಕ್ ಶಾಲೆಯ ಸಂಸ್ಥಾಪಕರಾದ ಜಿ.ಗೋಪಾಲರೆಡ್ಡಿ, ಮುಖ್ಯ ಶಿಕ್ಷಕಿ ಜಿ.ಸುಮ, ಕಾರ್ಯದರ್ಶಿ ಪಿ.ರವಿಕುಮಾರ್, ದೈಹಿಕ ಶಿಕ್ಷಣ ಶಿಕ್ಷಕ ಮುರಳಿ.ಆರ್, ಶಾಹೀನ, ಅನಿತಾ. ನೂರ್ ಆಯೇಶ, ನೇತ್ರಾವತಿ, ರಶ್ಮಿ.ಬಿ.ಸಿ, ಸ್ವಾತಿ, ಅಲ್ಮಾಜ್, ಜ್ಯೋತಿ, ಗೋಪಾಲಕೃಷ್ಣ, ನವೀನ್ , ಅರುಣ, ಶೋಭ, ಅರ್ಚನ, ಶಿವಮ್ಮ, ಲಕ್ಷ್ಮೀದೇವಮ್ಮ, ಸವಿತ, ಅಸ್ಮಾ, ಅಂರಿನ್, ಸುಮಯ, ಯಶೋಧ, ಶಿಲ್ಪ, ಸುಪ್ರಿಯ ಸೇರಿದಂತೆ ಇತರರು ಇದ್ದರು.




ವರದಿ: ಗೋಪಾಲಕೃಷ್ಣ, ಕೋಲಾರ

## ಶಾಲಾ ಮಕ್ಕಳಿಂದ ಹತ್ತನೇ ವರ್ಷದ ಯೋಗ ದಿನಾಚರಣೆ



ಕೊರಟಗೆರೆ:– ತಾಲೂಕಿನ ಹೊಳವನಹಳ್ಳಿ ಹೋಬಳಿ ಅರಸಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಹಾಗೂ ಪ್ರೌಢ ಶಾಲೆಯಲ್ಲಿ 10ನೇ ವರ್ಷದ ಯೋಗ ದಿನದ ಅಂಗವಾಗಿ ಶಾಲೆಯ ಮಕ್ಕಳು ಯೋಗಾಭ್ಯಾಸ ಮಾಡಿದರು.

ಶಾಲಾ ಮಕ್ಕಳಿಗೆ ಯೋಗಭ್ಯಾಸ ಹೇಳಿಕೊಟ್ಟ ಶಿಕ್ಷಕ ವೃಂದ, ಮಕ್ಕಳ ಜೊತೆಗೆ ಯೋಗಾಭ್ಯಾಸ ಮಾಡಿದರು.

ಪ್ರೌಢಶಾಲೆಯ ಶಾಲೆಯ ಮುಖ್ಯ ಶಿಕ್ಷಕರಾದ ಆನಂದ್ ಅವರು ಮಾತನಾಡಿ, ಯೋಗ ಎನ್ನುವುದು ನಮ್ಮ ಪೂರ್ವಿಕರಿಂದ ಬಂದ ಬಹುದೊಡ್ಡ ಕೊಡುಗೆ, ಯೋಗವನ್ನ ಮಕ್ಕಳು ತಮ್ಮ ಬಾಲ್ಯದಲ್ಲಿ ಅಭ್ಯಾಸ ಮಾಡಿದರೆ ದೇಹದಲ್ಲಿ ಉತ್ತಮ ಆರೋಗ್ಯ ವೃದ್ಧಿಸುತ್ತದೆ. ನಿರಂತರ ಯೋಗದಿಂದ ಯಾವುದೇ ರೋಗ ರೂಜಿನಗಳು ಬರದಂತೆ ದೇಹವನ್ನು ಕಾಪಾಡಿಕೊಳ್ಳಬಹುದು, ಭಾರತೀಯ ಜ್ಞಾನಪರಂಪರೆಯಲ್ಲಿ ಯೋಗಕ್ಕೆ ಹೆಚ್ಚು ಮಹತ್ವ ನೀಡಿರುವುದು ಗಮನಿಸಬೇಕು ಯೋಗಭ್ಯಾಸದಿಂದ ಏಕಾಗ್ರತೆ ಬೆಳೆಯುತ್ತದೆ ಎಂದು ತಿಳಿಸಿದರು.

ಪ್ರಾಥಮಿಕ ಶಾಲ ಶಿಕ್ಷಕಿ ನರ್ಮದಾ ಅವರು ಮಾತನಾಡಿ

ಪ್ರತಿನಿತ್ಯ ಯೋಗ ಮಾಡುವುದರಿಂದ ಮಾನಸಿಕ ಹಾಗೂ ದೈಹಿಕ ಸಾಮರ್ಥ್ಯ ದಿವಂಗಣವಾಗಲಿದೆ ಪ್ರತಿಯೊಬ್ಬರು ದಿನ ನಿತ್ಯ ಕನಿಷ್ಠ 10 ನಿಮಿಷಗಳ ಕಾಲ ಯೋಗ ಮಾಡಬೇಕು, ಸದೃಢ ಆರೋಗ್ಯವಾಗಿರಲು ಸಹಕಾರಿ ಯಾಗಲಿದೆ, ನಮ್ಮ ಆರೋಗ್ಯ ನಮ್ಮ ಕೈಯಲ್ಲಿದೆ ಅದರ ನಿರ್ವಹಣೆ ನಿರಂತರವಾಗಿ ನಡೆಯಬೇಕಾಗಿದೆ, ಪತಂಜಲಿ ಮಹರ್ಷಿಗಳು ಮನುಷ್ಯನ ಉದ್ಧಾರಕ್ಕಾಗಿಯೇ ಯೋಗವನ್ನು ನೀಡಿದ್ದಾರೆ ಎಂದು ತಿಳಿಸಿದರು.

## ಕರ್ತವ್ಯ ಲೋಪದ ಹಿನ್ನೆಲೆ ರ್‍ಯಾಪ್ಟೆ ಪಿಡಿಒ ಹನುಮಂತರಾಜು ಬಿ.ಎ ಸಸ್ಪೆಂಡ್

ಪಾವಗಡ: ತಾಲ್ಲೂಕಿನ ನಾಗಲಮಡಿಕೆ ಹೋಬಳಿ ವ್ಯಾಪ್ತಿಯ ರ್‍ಯಾಪ್ಟೆ ಗ್ರಾಮ ಪಂಚಾಯಿತಿಯ ಪಿಡಿಒ ಹನುಮಂತರಾಜು ಬಿ.ಎ ಅವರನ್ನು ಅಮಾನತು ಮಾಡಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ.ಪ್ರಭು ಆದೇಶಿಸಿದ್ದಾರೆ. ಗ್ರಾ.ಪಂ.ಅಧ್ಯಕ್ಷರು, ಸದಸ್ಯರು ಹಾಗೂ ಸಾರ್ವಜನಿಕರು ಸಲ್ಲಿಸಿದ ದೂರಿನ ಅರ್ಜಿಯನ್ನು ಪರಿಶೀಲಿಸಲಾಗಿ ಗ್ರಾಮ ಪಂಚಾಯಿತಿಯ ಕಾರ್ಯಕ್ರಮಗಳು ಮತ್ತು ಜಯಂತಿಗಳಿಗೆ ಯಾವುದೇ ಅನುಮತಿ ಪಡೆಯದೆ ಗೈರು ಹಾಜರಾಗಿರುತ್ತಾರೆ. ಸಾರ್ವಜನಿಕರ ದೂರವಾಣಿ ಕರೆಗೆ ಸ್ಪಂದಿಸುವುದಿಲ್ಲ. ನರೇಗಾ ಯೋಜನೆಯಡಿ ಮಂಜೂರಾದ ಕಾಮಗಾರಿಗಳ ಕೂಲಿ ಮೊತ್ತ ಪಾವತಿಸಲು ಹಾಗೂ ಇ–ಖಾತೆ ಮಾಡಿಕೊಡಲು ಹಣಕ್ಕೆ ಬೇಡಿಕೆ ಇಟ್ಟಿರುವುದು ಸೇರಿದಂತೆ ಗ್ರಾಮ ಸಭೆಯಲ್ಲಿ ಅನುಮೋದನೆಗೊಂಡ ಕ್ರಿಯಾಯೋಜನೆ ಈಗಾಗಲೇ ತಾಲ್ಲೂಕು ಪಂಚಾಯಿತಿಗೆ ಸಲ್ಲಿಸಿದ್ದು ಅಧ್ಯಕ್ಷರು ಹಾಗೂ ಸದಸ್ಯರ ಗಮನಕ್ಕೆ ತರದೇ ಹೆಚ್ಚುವರಿ ಕ್ರಿಯಾಯೋಜನೆ ತಯಾರಿಸಿ ಅಧಿಕಾರ ದುರುಪಯೋಗ ಪಡಿಸಿಕೊಂಡು ಕರ್ತವ್ಯ ಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ.

ಇದರಿಂದ ಕರ್ತವ್ಯದಲ್ಲಿ ಬೇಜವಾಬ್ದಾರಿ ಮತ್ತು ನಿರ್ಲಕ್ಷ್ಯ ಆರೋಪಗಳ ಮೇರೆಗೆ 1957ರ ನಿಯಮ 10(1)(ಡಿ)ರ ಉಪನಿಯಮದಂತೆ ಪ್ರದತ್ತವಾದ ಅಧಿಕಾರ ಚಲಾಯಿಸಿ, ಈಗಾಗಲೇ ಅವರ ವಿರುದ್ಧ ಇಲಾಖಾ ತನಿಖೆ ಬಾಕಿ ಇರಿಸಿ, ತುಮಕೂರು ಜಿ.ಪಂ ಸಿಇಒ ಜಿ.ಪ್ರಭು ಅಮಾನತು ಆದೇಶ ಹೊರಡಿಸಿದ್ದಾರೆ. ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರಿಯವರ ಲಿಖಿತ ಅನುಮತಿ ಇಲ್ಲದೆ ಕೇಂದ್ರ ಸ್ಥಾನ ಬಿಡುವಂತಿಲ್ಲ ಎಂದು ಸೂಚನೆ ನೀಡಿದ್ದಾರೆ.





## ವಿಶ್ವಯೋಗ ದಿನಾಚರಣೆಯ ದಶಮಾನೋತ್ಸವದ ಹಿನ್ನೆಲೆ ಯೋಗ ನಡಿಗೆ

ಶ್ರೀ ಪತಂಜಲಿ ಯೋಗ ಶಿಕ್ಷಣ ಸಮಿತಿವತಿಯಿಂದ ವಿಶ್ವಯೋಗ ದಿನಾಚರಣೆಯ ದಶಮಾನೋತ್ಸವದ ಅಂಗವಾಗಿ ಗುರುವಾರ ಪಟ್ಟಣದಲ್ಲಿ ಸಾರ್ವಜನಿಕ ಜಾಗೃತಿ ಜಾತ ಯೋಗನಡಿಗೆ ನಡೆಯಿತು. ಸಂತೆ ಬೀದಿಯಲ್ಲಿರುವ ಯೋಗ ಮಂದಿರದಿಂದ ಆರಂಭವಾದ ಯೋಗ ನಡಿಗೆ ಸಂತೆ ಬೀದಿ, ಪುರಭವನ ರಸ್ತೆ, ಶ್ರೀ ಟಿ. ವಿ. ವಿ ವೃತ್ತ, ಗೌರಿಬಿದನೂರು ರಸ್ತೆ, ನೃಪತುಂಗ ವೃತ್ತ ಇತರೆ ಕಡೆಗಳಲ್ಲಿ ನಡಿಗೆ ಕಾರ್ಯಕ್ರಮ ನಡೆಯಿತು. ಸಾರ್ವಜನಿಕ ಸ್ಥಳದಲ್ಲಿ ಯೋಗ ಉಪಯೋಗದ ಬಗ್ಗೆ ಬಿತ್ತಿ ಪತ್ರದ ಮೂಲಕ ಅರಿವು ಮೂಡಿಸಲಾಯಿತು.

Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH